ಸಂಪುಟ : 8 ಸಂಚಿಕೆ : 168 ಪುಟ : 4 ಬೆಲೆ : 3.00 ರವಿವಾರ ಆಗಸ್ಟ್ 06, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 168 Pages : 4 Price : 3.00 Sunday August 06, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದಲ್ಲಿ ಭಾನುವಾರ ನೀರು ಪೂರೈಕೆಯಾಗಲಿರುವ ಸ್ಥಳಗಳ ವಿವರ ಇಂತಿದೆ.

ವಾರ್ಡ್ ನಂ.6ರ ಫಣಿಬಂದ ಅವರ ಲೈನ್, ಪಿ ಪಿ ಗುಡಿಯವರ ಲೈನ್, ಮಾಕಾಪೂರ ಅವರ ಲೈನ್, ನಾವಳ್ಳಿಯವರ ಲೈನ್, ಬಾಳಿಕಾಯಿಯವರ ಲೈನ್, ಹೊನ್ನಪ್ಪನವರ ಲೈನ್, ಪಾಟೀಲರ ಲೈನ್, ಕೊಟಗಿ ಮಾಸ್ತರ ಲೈನ್, ಬಾಗ-1, 2, ವಾರ್ಡ್ ನಂ-17, 18, 19, 24, 25ರಲ್ಲಿ ಖಾನತೋಟ ಭಾಗಗಳು, 1, 2, ಬಾವಿ ಮೆಂಬರ್ ಲೈನ್, ಹಾವನೂರರ ಲೈನ್, ಹಿಡ್ಕಿಮಠ ಅವರ ಲೈನ್, ಭಾಗ-1, ಭಾಗ-2, ಕೋಟಿ ಅವರ ಲೈನ್, ಮುನಸಿ ಪ್ರೆಸ್ ಲೈನ್, ಕಾಗದಗೇರಿ ಹೊಸ ಲೈನ್, ಹಳೇ ಲೈನ್, ಭಟ್ಟರ ಲೈನ್, ಗಂಜಿಯವರ ಲೈನ್, ಪಿ&ಟಿ ರೋಡ್, ಕೋನೇರಿ ಹೊಂಡ ಲೈನ್, ವಾರ್ಡ್ ನಂ-34ರ ವಡ್ಡರಗೇರಿ ಲೈನ್ ಮುಂದಿನ ಭಾಗ, ಕೆಳಗಿನ ಭಾಗ, ಮೇಲಿನ ಭಾಗ, 34 ಪ್ಲಾಟ್ ಡಿಪೋ ರಸ್ತೆ ಲೈನ್, 1ನೇ ಕ್ರಾಸ್ ಮೂರಶಿಳ್ಳಿನ ವಕಾರ ಬಸವೇಶ್ವರ ಸ್ಕೂಲ್ ಎಡಭಾಗ, ಬಲಭಾಗ, ಮಸೀದಿ ಲೈನ್, ಗಾರ್ಡನ್ ಕೆಳಗಿನ ಹಾಗೂ ಮೇಲಿನ ಭಾಗ-1, ವಾರ್ಡ್ ನಂ-21, 22, 23ರಲ್ಲಿ ರಾಮದಾಸ ಅವರ ಲೈನ್, ಚೆನ್ನಪ್ಪನವರ ಲೈನ್, ಗುಳಗುಂದಿ ಲೈನ್, ಭೂಮಾ ಲೈನ್, ಮೇರವಾಡೆ ಲೈನ್, ಕಮತರ ಪ್ಲಾಟ್, ಮುನವಳ್ಳಿ ಪ್ಲಾಟ್, ಅಕ್ಕಿ ಪ್ಲಾಟ್, ವಾರ್ಡ್ ನಂ-3ರ ಕುಂಬಾರ ಓಣಿ, ಬಣ್ಣದ ನಗರ ಮಿಷನ್ ಕಂಪೌಂಡ್ ಭಾಗ-1 ಹಾಗೂ 2, ರಾಜಾಜಿ ನಗರ ರಜಪೂತ ಲೈನ್, ಹುಯಿಲಗೋಳ ಮಸೀದಿ ಲೈನ್, ಉಳಿದ ಬಾಗಗಳು, ವಾರ್ಡ್ ನಂ-7, ಬಾಗಲಕೋಟಿ ಲೈನ್, ಹಳೇ ಪೋಸ್ಟ್ ಆಫೀಸ್ ಲೈನ್, ಪಟ್ಟಣಶೆಟ್ಟರ ಲೈನ್, ಹುಚ್ಚನಗೌಡರ ಲೈನ್, ವಾಲ್ಮೀಕಿ ಲೈನ್, ಲೋಬೋಸಾ ಲೈನ್, ಗ್ವಾಡಿಯವರ ಓಣಿ, ಕಿಲ್ಲಾ ಲೈನ್, ಬಾರಕೇರ ಲೈನ್, ಮುಳಗುಂದ ಲೈನ್, ವಾರ್ಡ್ ನಂ-11, 12ರ ಇರಾನಿ ಕಾಲೋನಿ, ರಾಜೀವಗಾಂಧಿನಗರ, ಗುಂಪಿನ ಮನೆ, ಮಸೂತಿ ಲೈನ್, ಡಂಬಳ ಲೈನ್, ಭಾಂಡಗೆ ಲೈನ್, ವಾರ್ಡ್ ನಂ-12, 13, ಸಂಜೀವ ಆಸ್ಪತ್ರೆ ಬಾಗಮಾರ ಲೈನ್, ಹೊಂಬಳ ಲೈನ್, ಸಾಯಿಬಾಬಾ ಗುಡಿ ಲೈನ್, ಗರಗದ ಲೈನ್, ನವಲೆ ಲೈನ್, ಕೊಳಚೆ ಪ್ರದೇಶ ವಸ್ತ್ರದ ಲೈನ್, ಶಾಮ ಕುಲಕರ್ಣಿ ಲೈನ್ ಭಾಗ-1, ದ್ಯಾಮನಗೌಡ್ರ ಲೈನ್, ಪರತಗೌಡ್ರ ಲೈನ್‌ಗಳಲ್ಲಿ ನೀರು ಪೂರೈಕೆಯಾಗಲಿದೆ.

ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಲು ಪ್ರಕಟಣೆ ತಿಳಿಸಿದೆ.

## ಅರ್ಜಿ ಆಹ್ವಾನ


■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಜೆಎಂಎಫ್‌ಸಿ 3 ನೇ ನ್ಯಾಯಾಲಯ ಗದಗ-1 ಹುದ್ದೆ, ಲಕ್ಷ್ಮೇಶ್ವರದ ಹಿರಿಯ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ-1 ಹುದ್ದೆ , ಸಿಜೆ( ಕಿರಿಯ ವಿಭಾಗ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ನರಗುಂದ-1 ಹುದ್ದೆ , ಸಿಜೆ (ಕಿ.ವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ರೋಣ-1 ಹುದ್ದೆ ಮತ್ತು ಸಿಜೆ (ಕಿ.ವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮುಂಡರಗಿ-1 ಹುದ್ದೆ ಒಟ್ಟು 5 ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ಭರ್ತಿ ಮಾಡುವ ಸಲುವಾಗಿ ಅರ್ಹ ವಕೀಲರುಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಆಗಸ್ಟ್ 20 ಕೊನೆಯ ದಿನವಾಗಿದ್ದು, ಕಾನೂನು ಪದವೀಧರರಾಗಿ ಯಾವುದೇ ನ್ಯಾಯಾಲಯಗಳಲ್ಲಿ ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ಕೊನೆಯ ದಿನಾಂಕಕ್ಕೆ ಮೂರು ವರ್ಷಗಳಿಗೆ ಕಡಿಮೆ ಇಲ್ಲದಂತೆ ವಕೀಲರಾಗಿ ಸೇವೆ ಸಲ್ಲಿಸುತ್ತಿರುವ ವ್ಯಕ್ತಿಗಳು ಮಾತ್ರ ಅರ್ಜಿ ಸಲ್ಲಿಸಬಹುದು. ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರ ಹುದ್ದೆಗಳ ಗುತ್ತಿಗೆ ಆಧಾರದ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಗದಗ ಇಲ್ಲಿ ಸಂಪರ್ಕಿಸಬಹುದಾಗಿದೆ.

## ಆ.8ಕ್ಕೆ ಬಸವರಾಜ ಹೊರಟ್ಟಿ ಅವರ ಮುಂಡರಗಿ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ



ಮುಂಡರಗಿಯಲ್ಲಿ ನಡೆಯುವ ವಿವಿಧ ಕಾರ್ಯಕ್ರಮಗಳಲ್ಲಿ ಸಭಾಪತಿ ಬಸವರಾಜ್ ಹೊರಟ್ಟಿ ಅವರು ಭಾಗವಹಿಸಲಿದ್ದು, ಮಧಾಹ್ನ 12.30ಕ್ಕೆ ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘ, ತಾಲೂಕು ಘಟಕ ಮುಂಡರಗಿ, ಖಾಸಗಿ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಗಳ ಸಂಘ ಮುಂಡರಗಿ ಹಾಗೂ ರೋಟರಿ ಶಿಕ್ಷಣ ಸಂಸ್ಥೆ ಇವರ ಸಂಯುಕ್ತ ಆಶ್ರಯದಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳ ಹಾಗೂ ನೌಕರರ ಶೈಕ್ಷಣಿಕ ವಿಚಾರ ಸಂಕಿರಣ, ರೋಟರಿ ಶಿಕ್ಷಣ ಸಂಸ್ಥೆಯ ಶ್ರೀ ವ್ಹಿ ಜಿ ಲಿಂಬಿಕಾಯಿ ಪ್ರಾಥಮಿಕ ಮತ್ತು ಪ್ರೌಢಶಾಲೆಯ ನೂತನ ಶಾಲಾ ಕೊಠಡಿಗಳ ಉದ್ಘಾಟನೆ ಹಾಗೂ ಸನ್ಮಾನ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಮಧ್ಯಾಹ್ನ 3.30ಕ್ಕೆ ಅನ್ನದಾನೀಶ್ವರ ವಿದ್ಯಾ ಸಂಸ್ಥೆಯ ಮಹಿಳಾ ಕಾಲೇಜು ಉದ್ಘಾಟನೆ ಹಾಗೂ ಅನ್ನದಾನೀಶ್ವರ ವಿದ್ಯಾಸಂಸ್ಥೆಯ ಶತಮಾನೋತ್ಸವ ಸಂಭ್ರಮ ಆಚರಿಸುವ ಸಿದ್ಧತೆಗಾಗಿ ತೆರೆಯಲಿರುವ ಕಚೇರಿ ಉದ್ಘಾಟನೆ ನೆರವೇರಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಶಿಕ್ಷಣ ಪ್ರೇಮಿಗಳು, ಶಿಕ್ಷಕ ಬಂಧುಗಳು, ಶಿಕ್ಷಣ ಸಂಸ್ಥೆಯ ಪ್ರಮುಖರು ಭಾಗವಹಿಸುವಂತೆ ಸಂಘಟಕರಾದ ಡಿ. ಜಿ ಪೂಜಾರ, ಕೊಟ್ರೇಶ ಅಂಗಡಿ, ಎಸ್ ಎಸ್ ಗಡ್ಡದ, ಎಂ ಎಸ್ ತೆಗ್ಗಿನಮನಿ, ಸಿ ವಿ ಪಾಟೀಲ, ಎಂ ಬಿ ನಾಗರಳ್ಳಿ ವಿನಂತಿಸಿದ್ದಾರೆ.

## ನಾಳೆ 9ನೇ ಕೈಮಗ್ಗ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರದ ಜವಳಿ ಮಂತ್ರಾಲಯ ಅಭಿವೃದ್ಧಿ ಆಯುಕ್ತರವರ ಕಚೇರಿ( ಕೈಮಗ್ಗ) ನೇಕಾರರ ಸೇವಾ ಕೇಂದ್ರ ಬೆಂಗಳೂರು ಇವರಿಂದ ಆಗಸ್ಟ್ 7 ರಂದು ಮಧ್ಯಾಹ್ನ 2 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ 9ನೇ ಕೈಮಗ್ಗ ದಿನಾಚರಣೆ ಆಚರಿಸಲಾಗುತ್ತಿದೆ.

ರಾಜ್ಯದ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಸಂಸದರುಗಳಾದ ಶಿವಕುಮಾರ ಉದಾಸಿ, ನರಗುಂದ ಶಾಸಕ ಸಿ.ಸಿ.ಪಾಟೀಲ, ವಿಧಾನ ಪರಿಷತ್ ಸದಸ್ಯರುಗಳಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ್, ರೋಣ ಶಾಸಕ ಜಿ.ಎಸ್.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ-ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಆಗಮಿಸಲಿದ್ದಾರೆ.

---

**ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ ಅವರಿಂದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧಿಕಾರಿಗಳಿಗೆ ಸೂಚನೆ**

# ಶಿಥಿಲಾವಸ್ಥೆಯಲ್ಲಿರುವ ಶಾಲಾ, ಅಂಗನವಾಡಿ ಕಟ್ಟಡಗಳ ದುರಸ್ತಿಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಶಿಥಿಲಾವಸ್ಥೆಯಲ್ಲಿರುವ ಶಾಲಾ ಹಾಗೂ ಅಂಗನವಾಡಿ ಕಟ್ಟಡಗಳ ಕುರಿತು ಪರಿಶೀಲನೆ ನಡೆಸಿ ಅವುಗಳ ದುರಸ್ತಿಗೆ ತ್ವರಿತವಾಗಿ ಕ್ರಮ ವಹಿಸಿ ವಿದ್ಯಾರ್ಥಿಗಳ ಸುರಕ್ಷತೆಗೆ ಆದ್ಯತೆ ನೀಡುವಂತೆ ವಾಣಿಜ್ಯ ತೆರಿಗೆ ಇಲಾಖೆ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಸಿ.ಶಿಖಾ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.






ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಶನಿವಾರ ಸಾಯಂಕಾಲ ಜರುಗಿದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಅತಿವೃಷ್ಟಿ ಹಾಗೂ ಪ್ರವಾಹ ಪರಿಸ್ಥಿತಿ ಕುರಿತು ಮಾಹಿತಿ ಪಡೆದ ಅವರು, ಜನಸಾಮಾನ್ಯರ ಜೀವ ರಕ್ಷಣೆಗೆ ಆದ್ಯತೆ ನೀಡಬೇಕು. ಅತಿವೃಷ್ಟಿಯಿಂದ ಆಗುವ ಜೀವಹಾನಿ ತಡೆಗೆ ಅಗತ್ಯವಿರುವ ಎಲ್ಲ ಮುಂಜಾಗ್ರತಾ ಕ್ರಮಗಳನ್ನು ಎಲ್ಲ ಇಲಾಖೆಗಳು ಸಮನ್ವಯದೊಂದಿಗೆ ಕಾರ್ಯನಿರ್ವಹಿಸಲು ಸೂಚಿಸಿದರು.

ಗ್ರಾಮೀಣ ಭಾಗದಲ್ಲಿನ ಸಾರ್ವಜನಿಕರಿಗೆ ಸರಬರಾಜು ಮಾಡಲಾಗುತ್ತಿರುವ ಕುಡಿಯುವ ನೀರಿನ ಶುದ್ಧತೆ ಕುರಿತು ಕಡ್ಡಾಯವಾಗಿ ನೀರಿನ ಪರೀಕ್ಷೆಗೆ ಒಳಪಡಿಸಿ ಕುಡಿಯಲು ಯೋಗ್ಯವಿದ್ದಲ್ಲಿ ಮಾತ್ರ ನೀರನ್ನು ಬಳಸಲು ನಿರ್ದೇಶನ ನೀಡಬೇಕು. ಜೊತೆಗೆ ಸುತ್ತಲಿನ ವಾತಾವರಣದ ಸ್ವಚ್ಛತೆಗೆ ಆದ್ಯತೆ ನೀಡಲು ಜಾಗೃತಿ ಮೂಡಿಸಬೇಕು. ಸಾಂಕ್ರಾಮಿಕ ರೋಗಗಳ ಕುರಿತು ಎಚ್ಚರಿಕೆ ವಹಿಸುವಂತೆ ಸಂಬಂಧಿಸಿದ ಇಲಾಖಾ ಅಧಿಕಾರಿಗಳಿಗೆ ತಿಳಿಸಿದರು. ಸರ್ಕಾರದ ಆಶಯಕ್ಕನುಗುಣವಾಗಿ ಅಧಿಕಾರಿಗಳೆಲ್ಲ ಕಾರ್ಯನಿರ್ವಹಿಸಬೇಕುಎಂದರು.

ಸರ್ಕಾರದ ಮಹತ್ವಾಕಾಂಕ್ಷೆ ಗ್ಯಾರಂಟಿ ಯೋಜನೆಗಳ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಜಿಲ್ಲೆ ಉತ್ತಮ ಸಾಧನೆ ಮಾಡಬೇಕು. ಸರ್ಕಾರದ ಗ್ಯಾರಂಟಿ ಯೋಜನೆಗಳ ಸವಲತ್ತುಗಳಿಂದ ಅರ್ಹ ಫಲಾನುಭವಿಗಳು ವಂಚಿತರಾಗಬಾರದು. ಈ ಬಗ್ಗೆ ಸಂಬಂಧಿತ ಎಲ್ಲ ಇಲಾಖಾ ಅಧಿಕಾರಿಗಳು ನಿರಂತರ ಕಾರ್ಯನಿರ್ವಹಣೆ ಅಗತ್ಯವಾಗಿದೆ ಎಂದರು.

ಸಭೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ. ಎಂ.ಎಲ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಅವರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಯವರಿಗೆ ಜಿಲ್ಲೆಯ ಪ್ರಗತಿ ಕಾಮಗಾರಿಗಳ ಮಾಹಿತಿ ಒದಗಿಸಿ ಪ್ರಗತಿ ಪರಿಶೀಲನೆಗೆ ಸಹಕಾರ ನೀಡಿದರು. ಈ ಸಂದರ್ಭದಲ್ಲಿ ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ಜಿ.ಪಂ. ಮುಖ್ಯ ಯೋಜನಾಧಿಕಾರಿ ವಾಗೀಶ, ಜಂಟಿ ಕೃಷಿ ನಿರ್ದೇಶಕಿ ತಾರಾಮನಿ, ಜಿಮ್ಸ್ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ, ಲೀಡ್ ಬ್ಯಾಂಕ್ ಮ್ಯಾನೇಜರ್ ಜಬ್ಬಾರ ಅಹ್ಮದ್, ಸೇರಿದಂತೆ ಜಿಲ್ಲಾಮಟ್ಟದ ವಿವಿಧ ಇಲಾಖೆಗಳ ಮುಖ್ಯಸ್ಥರು ಹಾಜರಿದ್ದರು.

> ಶೈಕ್ಷಣಿಕ ರಂಗದಲ್ಲಿ ಜಿಲ್ಲೆಯ ಸ್ಥಾನಮಾನ ಕುರಿತು ಮಾಹಿತಿ ಪಡೆದ ಉಸ್ತುವಾರಿ ಕಾರ್ಯದರ್ಶಿ ಸಿ. ಶಿಖಾ, ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಪಿ.ಯು.ಸಿ. ಹಾಗೂ ಎಸ್.ಎಸ್.ಎಲ್.ಸಿ ಫಲಿತಾಂಶವು ಮೊದಲ ಹತ್ತು ಸ್ಥಾನಗಳಲ್ಲಿ ಇರುವಂತೆ ಕ್ರಮಗಳನ್ನು ತೆಗೆದುಕೊಳ್ಳಬೇಕು. ಜಿಲ್ಲೆಯಲ್ಲಿ ಶೈಕ್ಷಣಿಕ ಪ್ರಗತಿಗಾಗಿ ಅನೇಕ ಸೌಲಭ್ಯಗಳು ಇದ್ದರೂ ಸಹ ಕನಿಷ್ಠ ಪ್ರಗತಿಗೆ ಬೇಸರ ವ್ಯಕ್ತ ಪಡಿಸಿದ ಅವರು, ಶಿಕ್ಷಕರು ಹಾಗೂ ಇಲಾಖಾ ಅಧಿಕಾರಿಗಳು ಕಠಿಣ ಶ್ರಮ ಹಾಗೂ ಆಸಕ್ತಿಯಿಂದ ಮಕ್ಕಳ ಶೈಕ್ಷಣಿಕ ಪ್ರಗತಿಗೆ ನಿರಂತರ ಶ್ರಮಿಸಬೇಕೆಂದು ನಿರ್ದೇಶನ ನೀಡಿದರು.

---

**ಶೀಘ್ರ ನ್ಯಾಯದಾನ ವ್ಯವಸ್ಥೆಗಾಗಿ ರಾಜ್ಯದ ಸಿವಿಲ್ ಪ್ರೊಸೀಜರ್ ಕೋಡ್‌ಗೆ ತಿದ್ದುಪಡಿ; ಕಾನೂನು ಸಚಿವ ಹೆಚ್.ಕೆ.ಪಾಟೀಲ್**

# ಕಕ್ಷಿದಾರರಿಗೆ ಶೀಘ್ರ ನ್ಯಾಯದಾನ ವ್ಯವಸ್ಥೆ

■ವಿಜಯಸಾಕ್ಷಿ ಸುದ್ದಿ, ಉಡುಪಿ

ರಾಜ್ಯದಲ್ಲಿ ಕಕ್ಷಿದಾರರಿಗೆ ಶೀಘ್ರದಲ್ಲಿ ನ್ಯಾಯದಾನ ವ್ಯವಸ್ಥೆ ತಲುಪಿಸುವ ಉದ್ದೇಶದಿಂದ ರಾಜ್ಯದ ಸಿವಿಲ್ ಪ್ರೊಸೀಜರ್ ಕೋಡ್ ತಿದ್ದುಪಡಿ ಮಾಡಲು ವಿಧಾನಸಭೆಯ 2 ಸದನಗಳಲ್ಲಿ ಅನುಮೋದನೆ ಪಡೆದಿದ್ದು, ಇದನ್ನು ರಾಷ್ಟ್ರಪತಿಗ ಅಂಕಿತಕ್ಕಾಗಿ ಸಲ್ಲಿಸಲಾಗಿದೆ ಎಂದು ಕಾನೂನು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವ ಹೆಚ್. ಕೆ. ಪಾಟೀಲ್ ತಿಳಿಸಿದರು.



ಅವರು, ಶನಿವಾರ ಜಿಲ್ಲಾ ನ್ಯಾಯಾಂಗ ಉಡುಪಿ, ಲೋಕೋಪಯೋಗಿ ಇಲಾಖೆ ಉಡುಪಿ ಮತ್ತು ವಕೀಲರ ಸಂಘ ಬ್ರಹ್ಮಾವರ ಇವರ ಸಂಯುಕ್ತ ಆಶ್ರಯದಲ್ಲಿ ಬ್ರಹ್ಮಾವರದಲ್ಲಿ ನೂತನವಾಗಿ ಸೃಜಿಸಲ್ಪಟ್ಟ ಬ್ರಹ್ಮಾವರ ಸಂಚಾರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯದ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ವಿಳಂಬ ನ್ಯಾಯದಾನ ನ್ಯಾಯವನ್ನು ನಿರಾಕರಿಸಿದಂತೆ ಎಂಬ ಮಾತಿದೆ. ಕಕ್ಷಿದಾರರಿಗೆ ಶೀಘ್ರದಲ್ಲಿ ನ್ಯಾಯ ಒದಗಿಸುವ ಉದ್ದೇಶದಿಂದ ರಾಜ್ಯದ ಸಿವಿಲ್ ಪ್ರೊಸೀಜರ್ ಕೋಡ್ ತಿದ್ದುಪಡಿ ಮಾಡಲಾಗಿದ್ದು, ಇದರನ್ವಯ 6 ತಿಂಗಳ ಒಳಗೆ ವ್ಯಾಜ್ಯಗಳನ್ನ ವಿಲೇವಾರಿ ▸▸3ನೇ ಪುಟಕ್ಕೆ

> ಕರ್ನಾಟಕ ಉಚ್ಚ ನ್ಯಾಯಾಲಯ ನ್ಯಾಯಮೂರ್ತಿ ಹಾಗೂ ಜಿಲ್ಲಾ ನ್ಯಾಯಾಂಗ ಕಟ್ಟಡಗಳ ಸಮಿತಿ ಅಧ್ಯಕ್ಷ ಪಿ. ಎಸ್. ದಿನೇಶ್ ಕುಮಾರ್ ಮಾತನಾಡಿ, ರಾಜ್ಯದಲ್ಲಿ ಹೆಚ್ಚು ವ್ಯಾಜ್ಯಗಳಿರುವ ಅಂಕಿ ಅಂಶಗಳ ಆಧಾರದ ಮೇಲೆ ಮನೆ ಬಾಗಿಲಿಗೆ ಸೇವೆ ಉದ್ದೇಶದಿಂದ ಸಂಚಾರಿ ನ್ಯಾಯಾಲಯಗಳನ್ನು ಆರಂಭಿಸಲಾಗುತ್ತಿದೆ. ಬ್ರಹ್ಮಾವರದ ಸಂಚಾರಿ ನ್ಯಾಯಾಲಯವು ವಾರದಲ್ಲಿ 2 ದಿನ ಕಾರ್ಯ ನಿರ್ವಹಿಸಲಿದ್ದು, ಇಲ್ಲಿ ಖಾಯಂ ನ್ಯಾಯಾಲಯ ಆರಂಭಿಸುವ ಕುರಿತಂತೆ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು.

---

## ಆ. 8 ರಂದು ಗೃಹಜ್ಯೋತಿ ಯೋಜನೆಗೆ ಚಾಲನೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರದ ಇಂಧನ ಇಲಾಖೆಯಿಂದ ಗೃಹಜ್ಯೋತಿ ಯೋಜನೆಗೆ ಚಾಲನೆ ದೊರೆಯಲಿದ್ದು, ಕಾರ್ಯಕ್ರಮವು ಆಗಸ್ಟ್ 8 ರಂದು ಬೆ 11.30 ಗಂಟೆಗೆ ನಗರದ ಹುಬ್ಬಳ್ಳಿ ರಸ್ತೆಯಲ್ಲಿನ ಪರಿಸರ ಲೇಔಟ್‌ದ ಭಾರತ ರತ್ನ ಪಂ. ಭೀಮಸೇನ ಜೋಶಿ ರಂಗಮಂದಿರದಲ್ಲಿ ಜರುಗಲಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮತ್ತು ಇಂಧನ ಸಚಿವ ಕೆ.ಜೆ. ಜಾರ್ಜ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ಶಾಸಕ ಸಲೀಂ ಅಹ್ಮದ್, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರುಗಳಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕ ಸಿ.ಸಿ.ಪಾಟೀಲ, ರೋಣ ಶಾಸಕ ಜಿ.ಎಸ್.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ-ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ ಆಗಮಿಸಲಿದ್ದಾರೆ.

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ವಾಣಿಜ್ಯ ತೆರಿಗೆ ಇಲಾಖೆಯ ಆಯುಕ್ತರಾದ ಶ್ರೀಮತಿ ಸಿ ಶಿಖಾ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ವಿಶೇಷ ಆಹ್ವಾನಿತರಾಗಿ ಆಗಮಿಸಲಿದ್ದಾರೆ.

ಇಂಧನ ▸▸3ನೇ ಪುಟಕ್ಕೆ

## ಟ್ರ್ಯಾಕ್ ಕಾಮಗಾರಿ ಕಳಪೆ ಆರೋಪ: ತನಿಖೆಗಾಗಿ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಆರ್‌ಟಿಓ ಕಚೇರಿ ಹತ್ತಿರ ಟ್ರ್ಯಾಕ್ ಕಾಮಗಾರಿ ಕಳಪೆಯಾಗಿರುವ ಬಗ್ಗೆ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವಂತೆ ಕರ್ನಾಟಕ ರಾಜ್ಯ ಶ್ರೀ ಡಾ. ಪಂ. ಪುಟ್ಟರಾಜ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷ ಎಂ ಪಿ ಮುಳಗುಂದ ನೇತೃತ್ವದಲ್ಲಿ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ, ಸಾರಿಗೆ ಸಚಿವರಿಗೆ, ಅರಣ್ಯ ಇಲಾಖೆಯ ಮುಖ್ಯ ಕಾರ್ಯದರ್ಶಿಗಳಿಗೆ, ಭೂ-ವಿಜ್ಞಾನ ಮತ್ತು ಖನಿಜ ಇಲಾಖೆಗೆ ಮನವಿ ಸಲ್ಲಿಸಿದರು.



ಮನವಿ ಸಲ್ಲಿಸಿ ಮಾತನಾಡಿದ ಎಂ ಪಿ ಮುಳಗುಂದ, ಮಲ್ಲಸಮುದ್ರ ಗ್ರಾಮದಲ್ಲಿ ಗದಗ ಆರ್‌ಟಿಓ ಕಚೇರಿ ಹತ್ತಿರ ಟ್ರ್ಯಾಕ್ ಕಾಮಗಾರಿಯ ಹೆಸರಿನಲ್ಲಿ ಅಲ್ಲಿದ್ದ ಅರಣ್ಯವನ್ನು ನಾಶಗೊಳಿಸಿ, 15-20 ಅಡಿ ಎತ್ತರದ ಗುಡ್ಡವನ್ನು ಅಗೆದು ನೆಲಸಮ ಮಾಡಿ ಕಾಮಗಾರಿ ಮಾಡಲಾಗುತ್ತಿದೆ. ಸದರಿ ಕಾಮಗಾರಿ ಅತ್ಯಂತ ಕಳಪೆ ಮಟ್ಟದಲ್ಲಿ ನಡೆಯುತ್ತಿದ್ದು, ▸▸3ನೇ ಪುಟಕ್ಕೆ

---

**ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ ಅವರಿಂದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ**

# ಉತ್ತಮ ಗುಣಮಟ್ಟದ ಶಿಕ್ಷಣಕ್ಕೆ ಮೆಚ್ಚುಗೆ

■ವಿಜಯಸಾಕ್ಷಿ ಸುದ್ದಿ, ಗದಗ

ವಾಣಿಜ್ಯ ತೆರಿಗೆ ಇಲಾಖೆ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಸಿ.ಶಿಖಾ ಅವರು ಶನಿವಾರ ಜಿಲ್ಲೆಯ ವಿವಿಧ ಸರ್ಕಾರಿ ಕಟ್ಟಡಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಹುಲಕೋಟಿ ಗ್ರಾಮದ ಕೆ.ಎಚ್.ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಭೇಟಿ ನೀಡಿ ಕಟ್ಟಡ ವಿನ್ಯಾಸದ ಕುರಿತು ಮೆಚ್ಚುಗೆ ವ್ಯಕ್ತಪಡಿಸುತ್ತಾ ಕಟ್ಟಡದಲ್ಲಿ ಕಾರ್ಯನಿರ್ವಹಿಸುವ ಕಾಲೇಜಿನ ಕಾರ್ಯ ವೈಖರಿ ಕುರಿತು ಪ್ರಾಂಶುಪಾಲರದಾ ಡಾ.ಶಿವಪ್ಪ ಕುರಿ ಅವರಿಂದ ಮಾಹಿತಿ ಪಡೆದರು. ಸರ್ಕಾರಿ ಪದವಿ ಕಾಲೇಜು ಸಹ ಈ ಮಟ್ಟಿಗೆ ಸುಸಜ್ಜಿತವಾಗಿರುವದನ್ನು ಶ್ಲಾಘಿಸಿದ ಅವರು, ಈ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಇರುವ ವಿವಿಧ ಕೋರ್ಸುಗಳು ಹಾಗೂ ಅಗತ್ಯವಿರುವ ಕೋರ್ಸುಗಳ ಕುರಿತು ಅಲ್ಲದೇ ಪ್ರತಿ ತರಗತಿಯಲ್ಲಿ ಅಧ್ಯಯನ ನಡೆಸುತ್ತಿರುವ ವಿಧ್ಯಾರ್ಥಿಗಳ ಸಂಖ್ಯೆ ಕುರಿತು ಚರ್ಚಿಸಿದರು.

ಹುಲಕೋಟಿ ಪದವಿ ಕಾಲೇಜಿಗೆ ಆಗಮಿಸುವ ಸುತ್ತಲಿನ ವಿವಿಧ ಗ್ರಾಮಗಳ ವಿದ್ಯಾರ್ಥಿಗಳಿಗೆ ಇರುವ ಸಾರಿಗೆ ವ್ಯವಸ್ಥೆ ಕುರಿತು ಮಾಹಿತಿ ಪಡೆದ ಅವರು ಪದವಿ ಕಾಲೇಜಿನಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ ದೊರಕುತ್ತಿರುವದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

### ಅಂಗನವಾಡಿ ಭೇಟಿ

ಹುಲಕೋಟಿಯ ಅಂಗನವಾಡಿ ಕೇಂದ್ರ ನಂ.3ಕ್ಕೆ ಭೇಟಿ ನೀಡಿದ ಅವರು, ಅಂಗನವಾಡಿ ಸ್ವಚ್ಛತೆ ವೀಕ್ಷಿಸಿದರು. ನಂತರ ಅಂಗನವಾಡಿ ಶಿಕ್ಷಕಿಯರಿಗೆ ಮೊದಲ ಹಂತದ ತರಬೇತಿ ಆಗಿರುವ ಕುರಿತು ಖಚಿತ ಪಡಿಸಿಕೊಂಡು ಎನ್.ಇ.ಪಿ ಅಳವಡಿಕೆ ಕುರಿತು ಹಾಗೂ ಮಕ್ಕಳು ಕ್ರಿಯಾಶೀಲವಾಗಿ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಕುರಿತು ಸ್ವತಃ ತಾವೇ ಮಕ್ಕಳೊಂದಿಗೆ ಸಂವಹನ ನಡೆಸಿದರು.

ತದನಂತರ ▸▸3ನೇ ಪುಟಕ್ಕೆ

> **ಮುಕ್ತಿವನ**
>
> ಹುಲಕೋಟಿಯ ಮುಕ್ತಿವನಕ್ಕೆ ಭೇಟಿ ನೀಡಿದ ಅವರು, ಅಲ್ಲಿನ ಸ್ವಚ್ಛ, ಸುಂದರ ಪರಿಸರವನ್ನು ಹಾಗೂ ಉತ್ತಮ ನಿರ್ವಹಣೆ ಮಾಡುತ್ತಿರುವ ಕುರಿತು ಗ್ರಾಮ ಪಂಚಾಯತ ಕಾರ್ಯನಿರ್ವಹಣೆಯನ್ನು ಶ್ಲಾಘಿಸಿದರು. ಹುಲಕೊಟಿಯಲ್ಲಿ ನಿರ್ಮಾಣಗೊಂಡಿರುವ ಮುಕ್ತಿವನವು ಜಿಲ್ಲೆಗೆ ಮಾದರಿಯಾಗಿದ್ದು, ಇತರೆಡೆಗೂ ಅತ್ಯಾಧುನಿಕ ಸೌಲಭ್ಯಗಳ ಮುಕ್ತಿವನ ನಿರ್ಮಿಸಬೇಕೆಂದು ಹೇಳಿದರು.

## ಸಾಕ್ಷಿ ಸುಭಾಷಿತ

**ಶ್ರೀಮಂತಿಕೆ ಸ್ನೇಹಿತರನ್ನು ಕರೆತರುತ್ತದೆ; ಕಷ್ಟ ಮತ್ತು ಬಡತನ ಅವರ ವರ್ತನೆಯನ್ನು ಪರೀಕ್ಷಿಸುತ್ತದೆ.**

**–ಪಬ್ಲಿಯಸ್ ಸೈರೆಸ್**

## ಸಂಪಾದಕೀಯ

# ಮತ್ತೊಂದು ಹಿಟ್ ಆ್ಯಂಡ್ ರನ್ ಕೇಸ್

ರಸ್ತೆ ಅಪಘಾತ ಸಂದರ್ಭದಲ್ಲಿ ಕೇಳಿಬರುತ್ತಿದ್ದ ಹಿಟ್ ಆ್ಯಂಡ್ ರನ್ ವಾಕ್ಯ ಈಗ ರಾಜಕೀಯಕ್ಕೂ ಕಾಲಿಟ್ಟಿದೆ. ಮೊದಲೆಲ್ಲಾ ಆಕಸ್ಮಿಕವಾಗಿ ಕೇಳಿ ಬರುತ್ತಿದ್ದ ಇದನ್ನು ಈಗ ಪ್ರತಿನಿತ್ಯ ಕೇಳುವಂತಾಗಿದೆ. ಅದರಲ್ಲೂ ಆಡಳಿತ ಪಕ್ಷ ಕಾಂಗ್ರೆಸ್ ನಾಯಕರು ಪ್ರತಿದಿನ ಹಿಟ್ ಆ್ಯಂಡ್ ರನ್ ಜಪಿಸುತ್ತಿದ್ದಾರೆ.


ಇದಕ್ಕೆಲ್ಲಾ ಕಾರಣ ಮಾಜಿ ಸಿಎಂ, ಜೆಡಿಎಸ್ ನಾಯಕ ಎಚ್.ಡಿ. ಕುಮಾರಸ್ವಾಮಿ. ರಾಜ್ಯ ವಿಧಾನಸಭೆ ಚುನಾವಣೆಯಲ್ಲಿ ಹೀನಾಯ ಸೋಲಿನ ಬಳಿಕ ಕುಮಾರಸ್ವಾಮಿ ಹೆಚ್ಚು ಸಕ್ರಿಯರಾಗಿದ್ದಾರೆ. ಸದ್ಯ ಕುಮಾರಸ್ವಾಮಿ ಏನೇ ಮಾತಾಡಿದರೂ ಅದು ಸಾಕಷ್ಟು ಚರ್ಚೆ ಹುಟ್ಟುಹಾಕುವುದು ನಿಶ್ಚಿತ.

ಆದರೆ ಕುಮಾರಸ್ವಾಮಿ ಮಾಡಿದ ಬಹುತೇಕ ಆರೋಪಗಳು ಆಧಾರ ರಹಿತವಾಗಿವೆ. ಒಂದು ಗಂಭೀರ ವಿಷಯ ಹೇಗೆಲ್ಲಾ ನಾನಾ ರೂಪದಲ್ಲಿ ಜನರಲ್ಲಿ ಚರ್ಚೆಗೆ ಅವಕಾಶ ಕೊಟ್ಟು, ಕೊನೆಗೆ ಅದು ಹಾಸ್ಯವಾಗಿ ಮತ್ತೆ ಜನರ ಬಳಿ ಹೋಗುತ್ತದೆ ಎನ್ನುವುದಕ್ಕೆ ಕುಮಾರಸ್ವಾಮಿ ಹಲವಾರು ಬಾರಿ ಉದಾಹರಣೆಗಳನ್ನು ನೀಡಿದ್ದಾರೆ.

ಈ ಹಿಂದೆ ಜೇಬಿನಿಂದ ಪೆನ್ ಡ್ರೈವ್ ತೆಗೆದು ಸರಕಾರದ ಭ್ರಷ್ಟಾಚಾರದ ದಾಖಲೆಗಳು ಇದರಲ್ಲಿವೆ ಎಂದು ಆರೋಪಿಸಿದ್ದರು. ಆ ಪೆನ್ ಡ್ರೈವ್ ಹೊರಗೆ ಬರಲೇ ಇಲ್ಲ. ಈಗ ಬಿಡಿಎ, ವರ್ಗಾವಣೆ ವಿಷಯವಾಗಿ 1000 ಕೋಟಿ ರೂ. ಭ್ರಷ್ಟಾಚಾರದ ಆರೋಪ ಮಾಡುತ್ತಿದ್ದಾರೆ. ಇದ್ಯಾವುದಕ್ಕೂ ದಾಖಲೆ ಒದಗಿಸಿಲ್ಲ. ಒದಗಿಸುವುದು ಇಲ್ಲ.

ಅಷ್ಟಕ್ಕು ಕುಮಾರಸ್ವಾಮಿ ಆರೋಪಗಳನ್ನು ಸಂಪೂರ್ಣವಾಗಿ ತಿರಸ್ಕರಿಸಲು ಸಾಧ್ಯವಿಲ್ಲ. ಭ್ರಷ್ಟಾಚಾರ ಅಲ್ಪ ಪ್ರಮಾಣದಲ್ಲಿ ನಡೆಯುವುದು ನಿಶ್ಚಿತ ಎನ್ನುವುದು ಎಲ್ಲರಿಗೂ ಗೊತ್ತಿರುವ ವಿಚಾರವೇ. ಆದರೆ ಸಾರ್ವಜನಿಕವಾಗಿ ಅದರ ವಿರುದ್ಧ ಆರೋಪ ಮಾಡುವಾಗ ಕನಿಷ್ಠ ದಾಖಲೆಗಳಾದರೂ ಬೇಕಾಗುತ್ತದೆ. ಇಲ್ಲದಿದ್ದರೆ ಆ ಹೇಳಿಕೆಗೆ ಅರ್ಥ ಬರುವುದಿಲ್ಲ. ಅದರಲ್ಲೂ ಯಾರೊಬ್ಬರನ್ನು ಉಲ್ಲೇಖಿಸದೆ, ಇಡೀ ಸರಕಾರವನ್ನೇ ಗುರಿಯಾಗಿಟ್ಟುಕೊಂಡು ಭ್ರಷ್ಟಾಚಾರದ ಆರೋಪ ಮಾಡುವುದರಿಂದ ಯಾವುದೇ ಲಾಭ ಆಗುವುದಿಲ್ಲ. ಮಾಜಿ ಮುಖ್ಯಮಂತ್ರಿಯೊಬ್ಬರು ಈ ರೀತಿಯ ಆರೋಪ ಮಾಡುವುದನ್ನು ಬಿಟ್ಟು, ಸ್ಪಷ್ಟ ದಾಖಲೆಗಳನ್ನು ಕೊಟ್ಟು ಮಾತಾಡುವುದರಿಂದ ಅವರ ಗೌರವ ಘನತೆ ಹೆಚ್ಚಾಗುತ್ತದೆ. ಮುಖ್ಯವಾಗಿ ಬ್ಲಾಕ್ ಮೇಲ್ ರೀತಿಯ ಹೇಳಿಕೆ ನೀಡುವುದನ್ನು ಬಿಟ್ಟು ಅನುಭವಿ ರಾಜಕಾರಣಿಯಂತೆ ಹೇಳಿಕೆ ನೀಡಬೇಕಾಗಿದೆ. ಕುಮಾರಸ್ವಾಮಿ ಅವರು ಈ ಹಿಂದಿನ ಅಧಿವೇಶನಗಳಲ್ಲಿ ಜನಸಾಮಾನ್ಯರ ಪರವಾಗಿ ಅನೇಕ ವಿಚಾರಗಳನ್ನು ಮಾತಾಡಿದ್ದಾರೆ. ಆ ಗಂಭೀರತೆ ಸದನದ ಹೊರಗಡೆಯೂ ಅವರಿಂದ ವ್ಯಕ್ತವಾದಲ್ಲಿ ಮಾತ್ರ ಪ್ರಜಾಪ್ರಭುತ್ವ ಮತ್ತಷ್ಟು ಗಟ್ಟಿಗೊಳ್ಳಲು ಸಾಧ್ಯ. ಜನರಿಗೆ ಪ್ರತಿಪಕ್ಷಗಳ ಮೇಲೆ ನಂಬಿಕೆ ಮೂಡಲು ಸಾಧ್ಯ.

## ಅಮ್ಮ ಮೊಬೈಲ್ ಬಿಟ್ಟು ನನ್ನ ಪ್ರೀತಿಯಿಂದ ಮುದ್ದಿಸು ಬಾ



ಈ ತಾಯಿಯ ಚಿತ್ತ ಮೊಬೈಲ್‌ನತ್ತ
ಮಗುವಿನ ಆಟ ತಾಯಿಯ ನೋಟ
ಹೊಟ್ಟೆಗೆ ಕುಡಿಸುವ ಹಾಲು ಒಂದು ಕಡೆ
ತಿರುಗಿ ನೋಡುತ್ತಿಲ್ಲ ತಾಯಿ ಇನ್ನೊಂದು ಕಡೆ

ಓ ಅಮ್ಮ ನಿಮಗೆ ಯಾಕೆ ಬೇಕು ಈ ಹಾಳಾದ ಮೊಬೈಲ್ ಹುಚ್ಚು
ಮುಂದೆ ಒಂದು ದಿನ ನನ್ನ ತಲೆಗೆ ಏರಲಿದೆ ಈ ಮೊಬೈಲ್ ಕಿಚ್ಚು
ಎಲ್ಲೆಡೆಯೂ ತುಂಬಿ ತುಳುಕುತ್ತಿದೆ ಈ ಮೊಬೈಲ್ ಎಂಬ ಭೂತ
ಹಗಲು ರಾತ್ರಿ ಎನ್ನದೆ ಬಿಟ್ಟು ಬಿಡದೆ ತಪ್ಪುತ್ತಿಲ್ಲ ಈ ಅನಾಹುತ

ಅಮ್ಮ ಹಸಿದ ಹೊಟ್ಟೆಗೆ ಹಾಲು ಕುಡಿಸುವ ಹೊತ್ತಾಯಿತು ಬಾ
ಅಮ್ಮ ಮೊಬೈಲ್ ಬಿಟ್ಟು ನನ್ನನ್ನು ಪ್ರೀತಿಯಿಂದ ಮುದ್ದಿಸು ಬಾ
ಅಮ್ಮ ನಿನ್ನ ಹೃದಯದ ಹಾಲಿನ ಕಡಲಲ್ಲಿ ನನ್ನ ತೇಲಿಸು ಬಾ
ಅಮ್ಮ ಈ ನಿನ್ನ ಮಡಿಲಲ್ಲಿ ನನ್ನ ಪ್ರೀತಿಯಿಂದ ಮಲಗಿಸು ಬಾ

ನನ್ನ ನವಮಾಸದ ಒಂಬತ್ತು ತಿಂಗಳು ಹೆತ್ತು ಹೊತ್ತವರು ನೀವು
ಸುತ್ತ ಕತ್ತಲು ತುಂಬಿದ ರಾತ್ರಿಯಲ್ಲಿ ಹಾಲುಣಿಸಿದವರು ನೀವು
ಅಮ್ಮ ನಾನು ಕುಂಚದ ಮಂಚದ ಮೇಲಿಂದ ಕೆಳಕ್ಕೆ ಬಿದ್ದಿರುವೆ
ಅಮ್ಮ ಸಮಾಜದ ಮುಂದೆ ನಿಮ್ಮ ಪ್ರೀತಿಯ ಹೆಸರನ್ನು ತರುವೆ

ಹಿಂದೆ ಒಂದು ಕಾಲದಲ್ಲಿ ಈ ಮೊಬೈಲ್‌ಗಳು ಇರಲಿಲ್ಲ ಅಮ್ಮ
ಇಂದು ಈ ಕೈಯಲ್ಲಿ ನಿಂತಲ್ಲಿ ಕುಂತಲ್ಲಿ ಕುಣಿದಾಡುತ್ತಿವೆ ಅಮ್ಮ
ಈ ನಿನ್ನ ಎದೆಯ ಅಂಗಳದ ಮಡಿಲಲ್ಲಿ ನಲಿಯುವೆ ನಾನಮ್ಮ
ಕೆಳಗಡೆ ಬಿದ್ದಿರುವ ನನ್ನನ್ನು ಪ್ರೀತಿಯಿಂದ ರಕ್ಷಿಸು ಬಾ ನನ್ನಮ್ಮ.

**–ಸಿ ಆರ್ ಗಡಾದ,** ಗದಗ.

### ಜಂಗಮವಾಣಿಯನ್ನು ಅಗತ್ಯಕ್ಕೆ ತಕ್ಕಂತೆ ಬಳಸಿ–ಅತಿಯಾದರೆ ಅಮೃತವೂ ವಿಷ

# ಮಕ್ಕಳ ಕೈಯಲ್ಲಿ ಮೊಬೈಲ್: ಎಚ್ಚರಿಕೆ ಅಗತ್ಯ



ಈಗಿನ ಕಾಲ 'ಸರ್ವಂ ಮೊಬೈಲ್‌ಮಯಂ' ಎನ್ನುವಂತಾಗಿದೆ! ಒಂದು ಕ್ಷಣ ನಮ್ಮ ಕೈಯಲ್ಲಿ ಮೊಬೈಲ್ ಇಲ್ಲದಿದ್ದರೆ ಏನನ್ನೋ ಕಳೆದುಕೊಂಡಿದ್ದೇವೆ ಎಂಬ ಭಾವನೆ ಮೂಡದೆ ಇರದು. ಊಟ ಬಿಟ್ಟೇವು, ಮೊಬೈಲ್ ಬಿಡೆವು ಎನ್ನುವ ಮಟ್ಟಕ್ಕೆ ಈಗ ಮೊಬೈಲ್ ಎಲ್ಲರಿಗೂ ಅತ್ಯವಶ್ಯಕವಾಗಿ ಬೇಕಾಗಿದೆ. ಹಾಸಿಗೆಯಿಂದ ಮೇಲೆ ಏಳಬೇಕಾದರೆ ನಾವು ದೇವರ ಫೋಟೋವನ್ನು, ಶ್ಲೋಕಗಳನ್ನೂ ಪಠಿಸುತ್ತಿದ್ದ ಕಾಲ ಹೋಗಿ, ನಮ್ಮ ಪಕ್ಕದಲ್ಲಿ ಇರುವ ಮೊಬೈಲ್ ನೋಡುತ್ತಲೇ ಮೇಲೇಳುತ್ತೇವೆ. ನಂತರ ರಾತ್ರಿ ಮಲಗುವ ತನಕವೂ ಕೂಡ ಮೊಬೈಲ್ ಒಂದಲ್ಲ ಒಂದು ರೀತಿಯಲ್ಲಿ ನಮ್ಮನ್ನು ಆವರಿಸಿಕೊಂಡಿರುತ್ತದೆ.

ಈ ಮೊಬೈಲ್ ದೊಡ್ಡವರಿಗಷ್ಟೇ ಅಲ್ಲದೆ, ಚಿಕ್ಕವರನ್ನು ಕೂಡ ಸೂಜಿಗಲ್ಲಿನಂತೆ ಸೆಳೆಯುತ್ತಿದೆ. ಚಿಕ್ಕ ವಯಸ್ಸಿನಲ್ಲೇ ಮಕ್ಕಳು ಮೊಬೈಲನ್ನು ಬಳಸಿ ಅನೇಕ ದುರಂತಗಳು ಕೂಡ ನಡೆದಿವೆ. ಸಾಮಾಜಿಕ ಜಾಲತಾಣಗಳಲ್ಲಿ ಮೊಬೈಲ್ ಬಳಕೆಯಿಂದ ಮಕ್ಕಳು ದುರಂತಕ್ಕೀಡಾದ ಅನೇಕ ಚಿತ್ರಣಗಳು, ವರದಿಗಳು ಬರುತ್ತಲೇ ಇವೆ. ಎಷ್ಟೋ ಮಕ್ಕಳು ಮೊಬೈಲ್ ತೆಗೆಸಿಕೊಡಲಿಲ್ಲ ಎಂದು ಆತ್ಮಹತ್ಯೆ ಮಾಡಿಕೊಂಡ ಉದಾರಣೆಗಳೂ ಸಾಕ್ಷಿವೆ.

ಇತ್ತೀಚೆಗಷ್ಟೆ ಉತ್ತರ ಕನ್ನಡ ಜಿಲ್ಲೆಯಲ್ಲಿ ಚಿಕ್ಕ ಮಗುವೊಂದು ನಾಲಿಗೆಯಲ್ಲಿ ಮೊಬೈಲ್ ಚಾರ್ಜರ್ ಹಾಕಿಕೊಂಡು, ವಿದ್ಯುತ್ ಪ್ರವಹಿಸಿ, ಸಾವನ್ನಪ್ಪಿರುವ ಘಟನೆ ಹೃದಯ ಹಿಂಡುವಂತದ್ದು.

ಹಿಂದೆ ಲ್ಯಾಂಡ್‌ಲೈನ್ ಬಳಸುವಾಗ ನೂರಾರು ನಂಬರ್‌ಗಳು ನಮ್ಮ ಮನದಲ್ಲಿ ನೆನಪಿನಲ್ಲಿರುತ್ತಿದ್ದವು. ಈಗ ಮೊಬೈಲ್‌ಫೋನ್‌ನಲ್ಲೇ ಎಲ್ಲಾ ಸೇವ್ ಮಾಡಿಕೊಂಡು, ನಮ್ಮ ನಂಬರ್ ಕೂಡ ನೆನಪಿಗೆ ಬರದಂತಾಗಿದೆ. ಕೋವಿಡ್ 19ನಿಂದಾಗಿ ಮಕ್ಕಳಿಗೆ ಮೊಬೈಲ್ ಮತ್ತಷ್ಟು ಹತ್ತಿರವಾಯಿತು.

ಶಾಲಾ ಕಾಲೇಜಿನಲ್ಲಿ ಈಗ ಮೊಬೈಲ್ ಬಳಕೆ ನಿಷಿದ್ಧವಾಗಿದೆ. ಮನೆಯಲ್ಲೂ ಕೂಡ ಮೊಬೈಲ್ ಬಳಕೆಯನ್ನು ನಾವು ಅವರು ಕಾಲೇಜು ಹಂತದವರೆಗೆ ನಿಷೇಧಿಸಿದರೆ ತುಂಬಾ ಅನುಕೂಲವಾಗುತ್ತದೆ. ಇಲ್ಲಿ ಗಮನಿಸಬೇಕಾದ ಅಂಶವೆಂದರೆ, ಮೊದಲು ಮಕ್ಕಳ ಎದುರು ಮೊಬೈಲ್ ನೋಡುವುದನ್ನು ದೊಡ್ಡವರು ಬಿಡಬೇಕು. ಈಗ ಮೊಬೈಲ್ ಪೂರ್ತಿಯಾಗಿ ಮಕ್ಕಳಿಗೆ ಮನರಂಜನೆಯಾಗಿದೆ.

ಅದರಿಂದಾಗಿ ಅವರ ಮನಸ್ಸನ್ನು ಪರಿವರ್ತನೆ ಮಾಡಿ ಮಕ್ಕಳಿಗೆ ಆಟಗಳಲ್ಲಿ ತೊಡಗಿಸಿಕೊಳ್ಳಲು ಸಲಹೆ ನೀಡಬೇಕು. ಜೊತೆಗೆ ಸಾಹಿತ್ಯ, ಸಂಗೀತ ಇನ್ನಿತರ ಚಟುವಟಿಕೆಗಳಲ್ಲಿ ಮಕ್ಕಳನ್ನು ತೊಡಗಿಸಬೇಕು. ಸಮಯದ ಸದುಪಯೋಗಪಡಿಸಿಕೊಳ್ಳಲು ಮಾರ್ಗದರ್ಶನ ನೀಡಬೇಕು.

ನಾವು ಚಿಕ್ಕ ಮಕ್ಕಳಿಗೆ ಊಟ ಮಾಡಿಸುವಾಗ ಅವು ಹಠ ಹಿಡಿಯುತ್ತವೆ ಎಂದು ಮೊದಲು ಕೊಡುವುದೇ ಮೊಬೈಲನ್ನು! ಅದನ್ನು ಬಿಟ್ಟು ಬದಲಿ ವ್ಯವಸ್ಥೆ ಮಾಡಿಕೊಳ್ಳಬೇಕು. ಹಿಂದೆ ಬಾಲ್ಯದಲ್ಲಿ ಮಕ್ಕಳಿಗೆ ಹೊರಗಡೆ ಬಂದು ಚಂದಮಾಮನನ್ನು ತೋರಿಸಿ ಊಟ ಮಾಡಿಸುತ್ತಿದ್ದರು. ಅವಿಭಕ್ತ ಕುಟುಂಬಗಳು ಕಾಣೆಯಾಗಿ, ವಿಭಕ್ತ ಕುಟುಂಬಗಳು ಹೆಚ್ಚಿವೆ. ಇದರಿಂದ ಮಕ್ಕಳಿಗೆ ಏಕಾಂಗಿತನ ಕಾಡುತ್ತಿದೆ. ತಂದೆ–ತಾಯಿ ಅವರ ನಿತ್ಯದ ಜಂಜಾಟಗಳಿಂದ ಮಕ್ಕಳ ಜೊತೆ ಸಮಯ ಕಳೆಯುವುದೇ ಕಡಿಮೆಯಾಗಿದೆ. ಅವರ ಜೊತೆಯಲ್ಲಿ ಬೆಳಿಗ್ಗೆ, ಸಂಜೆ ಸ್ವಲ್ಪ ಸಮಯ ಕಳೆದರೆ ಅವರು ಮೊಬೈಲ್ ನೋಡುವುದನ್ನು ಕೂಡ ಕಡಿಮೆ ಮಾಡುತ್ತಾರೆ.

ಆದರೆ ಮೊಬೈಲ್‌ನಿಂದ ಮಕ್ಕಳಿಗೆ ಯಾವುದೇ ರೀತಿಯ ಪ್ರಯೋಜನ ಇಲ್ಲವೇ? ಎನ್ನುವ ಪ್ರಶ್ನೆ ಮೂಡದೆ ಇರದು. ಮೊಬೈಲ್ ಬಳಕೆಯಿಂದಾಗಿ ಮಕ್ಕಳಿಗೆ ಅಪರಿಚಿತ, ಕಷ್ಟದ ಇಂಗ್ಲಿಷ್ ಶಬ್ದಗಳು, ಪ್ರಬಂಧ ಬರೆಯಲು, ಪ್ರಾಕ್ಟಿಕಲ್ ಪರೀಕ್ಷೆಗಳನ್ನು ಎದುರಿಸಲು ಇನ್ನಿತರ ವಿಷಯಗಳಲ್ಲಿ ನೆರವಾಗಿದೆ. ಅನೇಕ ಮಕ್ಕಳು ಮೊಬೈಲ್‌ನಿಂದ ಸದಭಿರುಚಿಯ ಹವ್ಯಾಸಗಳನ್ನು ರೂಢಿಸಿಕೊಂಡು ಲಿಮ್ಕಾ, ಗಿನ್ನಿಸ್ ದಾಖಲೆ ಮಾಡಿರುವ ವಿಷಯವು ಕೂಡ ನಮ್ಮ ಕಣ್ಣೆದುರಿಗೆ ಇದೆ. ಆದರೆ ನಾವು ಮೊಬೈಲ್‌ನಿಂದ ಯಾವ ರೀತಿ ಪ್ರಯೋಜನ ಪಡೆದುಕೊಳ್ಳುತ್ತೇವೆ ಅದರ ಮೇಲೆ ಅವಲಂಬಿತವಾಗಿರುತ್ತದೆ.

ಚಿಕ್ಕ ಮಕ್ಕಳಿಗೆ ಮೊಬೈಲ್ ಕೈಗೆ ಸಿಗದಂತೆ ನೋಡಿಕೊಳ್ಳಬೇಕು. ಚಾರ್ಜ್ ಮಾಡಿದ ನಂತರ ಚಾರ್ಜರ್ ಅನ್ನು ಬೇರೆಡೆ ಎತ್ತಿಡಬೇಕು.

ಇದೇ ರೀತಿ ಚಿಕ್ಕ ಮಕ್ಕಳು ಹಾಸಿಗೆ ಅಥವಾ ಟೇಬಲ್ ಬಳಿ ಇರುವ ವಿದ್ಯುತ್ ಸ್ವಿಚ್‌ಬೋರ್ಡ್‌ಗಳು ಅವರ ಕೈಗೆಟುಕದಂತೆ ನೋಡಿಕೊಳ್ಳಬೇಕು. ಅತಿಯಾದ ಮೊಬೈಲ್ ಬಳಕೆಯಿಂದಾಗಿ ಸೆಲ್ಫಿ ಹುಚ್ಚು ಕೂಡ ಮಕ್ಕಳಿಗೆ ಹೆಚ್ಚಿದೆ. ಅಪಾಯದ ಸ್ಥಳದಲ್ಲಿ ಮೊಬೈಲ್ ಬಸುವುದು ಕೂಡ ಹೆಚ್ಚಿದೆ. ಒಟ್ಟಿನಲ್ಲಿ, ದೊಡ್ಡವರಾದವರು ಮಕ್ಕಳನ್ನು ಎಷ್ಟು ಮುತುವರ್ಜಿ ವಹಿಸಿದರೂ ಸಾಲದು. ಮಕ್ಕಳ ಕೈಯಲ್ಲಿ ಮೊಬೈಲ್ ಕೊಡುವುದನ್ನು ಮೊದಲು ನಿಲ್ಲಿಸೋಣ. ಎಚ್ಚರಿಕೆ ವಹಿಸೋಣ.

**–ಕಾಳಿಹುಂಡಿ ಶಿವಕುಮಾರ್,** ಮೈಸೂರು.

# 81 ಸಸಿಗಳನ್ನು ನೆಟ್ಟು ಜನ್ಮದಿನ ಆಚರಣೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಪಟ್ಟಣದ ಪುಲಿಗೆರೆ ಶ್ರೀ ಸೋಮೇಶ್ವರ ವಾಯು ವಿಹಾರ ಬಳಗ ಸವಣೂರ ರಸ್ತೆ ಹಾಗೂ ದಿ ಮರ್ಚಂಟ್ಸ್ ಅಸೋಸಿಯೇಷನ್(ಎಪಿಎಂಸಿ ಸಹಯೋಗದಲ್ಲಿ) ವಾಯು ವಿಹಾರ ಬಳಗದ ಅಧ್ಯಕ್ಷ ಮಹಾಬಳೇಶ್ವರಪ್ಪ ಬೇವಿನಮರದ ಅವರ 81ನೇ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸುವ ನಿಟ್ಟಿನಲ್ಲಿ 81 ಸಸಿಗಳನ್ನು ನೆಡುವ ಮೂಲಕ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಹಿರಿಯ ಬಂಡಾಯ ಸಾಹಿತಿ ಸಿ ಜಿ ಹಿರೇಮಠ, ಪರಿಸರ ಜಾಗೃತಿ ಪ್ರತಿಯೊಬ್ಬರಲ್ಲೂ ಮೂಡಬೇಕು. ಪ್ರತಿಯೊಬ್ಬರೂ ತಲಾ ಒಂದು ಸಸಿ ನೆಟ್ಟು ಪರಿಸರ ಸಂರಕ್ಷಣೆಗೆ ಕೈಜೋಡಿಸಬೇಕು. ವಾಯುವಿಹಾರ ಬಳಗದಿಂದ ಅನೇಕ ಸಮಾಜಮುಖಿ ಕೆಲಸ ಮಾಡುತ್ತಾ ಬಂದಿದ್ದು, ಜನ್ಮದಿನವನ್ನು ಕೇಕ್ ಕತ್ತರಿಸಿ ಸಂಭ್ರಮಿಸುವ ಬದಲು, ಇಂತಹ ಕಾರ್ಯಕ್ರಮ ಮಾಡಿದ್ದು ಸಂಚಸದ ವಿಚಾರ. ಪ್ರತಿಯೊಬ್ಬರೂ ಪರಿಸರ ರಕ್ಷಣೆ ಮಾಡುವಲ್ಲಿ ಮುಂದಾಗೋಣ ಎಂದರು. ಈ ಸಂದರ್ಭದಲ್ಲಿ ಎ ಪಿ ಸುಗಂಧಿ, ಸಿದ್ದನಗೌಡ್ರ ಬಳ್ಳೊಳ್ಳಿ, ಎಂ ಕೆ ಕಳ್ಳಿಮಠ, ಎಸ್ ಕೆ ಕಾಳಪ್ಪನವರ, ಸಿ ಆರ್ ಕೆಂಚಕ್ಕನವರ, ಚಂದ್ರಣ್ಣ ಓದುನವರ, ಚಂಬಣ್ಣ ಬಾಳಿಕಾಯಿ, ಎಸ್ ಜೆ ಪುರಾಣಿಕಮಠ, ಡಾ. ಪಿ ಡಿ ತೋಟದ, ಪಿ ಸಿ ಹೊರಟ್ಟಿ, ವಿ ಎ ಗಿರಡ್ಡಿ, ಈರಣ್ಣ ಅಕ್ಕೂರ, ಈರಣ್ಣ ಅಂಕಲಕೋಟಿ, ಶಿವಯೋಗಿ ಗಡ್ಡದೇವರಮಠ, ಸುರೇಶ ಕೊಂಡಿಕೊಪ್ಪ ಮುಂತಾದವರಿದ್ದರು.

# ಜೈನ ಮುನಿ ಹತ್ಯೆ ಪ್ರಕರಣ: ಡಿಜಿಪಿ ಖುದ್ದು ಪರಿಶೀಲನೆ



**■ವಿಜಯಸಾಕ್ಷಿ ಸುದ್ದಿ, ಚಿಕ್ಕೋಡಿ**

ತಾಲೂಕಿನ ಹಿರೇಕೋಡಿ ನಂದಿ ಪರ್ವತ ಆಶ್ರಮದ ಜೈನಮುನಿ ಕಾಮಕುಮಾರ ನಂದಿ ಮಹಾರಾಜರ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಖುದ್ದು ಸಿಐಡಿ ಡಿಜಿಪಿ ಡಾ ಎಂ ಎ ಸಲೀಂ ಅವರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲೂಕಿನ ಹಿರೇಕೋಡಿಯ ನಂದಿ ಪರ್ವತದ ಆಶ್ರಮಕ್ಕೆ ಇವತ್ತು ಸಿಐಡಿ ಹಿರಿಯ ಅಧಿಕಾರಿ ಡಿಜಿಪಿ ಡಾ.ಎಂ ಎ ಸಲೀಂ ಭೇಟಿ ನೀಡಿ ಪರಿಶೀಲನೆ ನಡೆಸಿ ಕೆಲವು ಕಾಲ ಸ್ಥಳಿಯರ ಜೊತೆ ಈಗಾಗಲೇ ತನಿಖೆ ಮಾಡಿರುವ ಅಧಿಕಾರಿಗಳ ಜೊತೆ ಸಮಾಲೋಚನೆ ನಡೆಸಿದರು. ಈ ವೇಳೆ ಕಾಮಕುಮಾರ ನಂದಿ ಮಹಾರಾಜರ ಕೊಠಡಿಗೆ ತೆರಳಿ ಪರಿಶೀಲನೆ ನಡೆಸಿದರು.

ಕೊನೆ ಹಂತಕ್ಕೆ ಸಿಐಡಿ ತನಿಖೆ:ಸದನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈ ಪ್ರಕರಣವನ್ನು ಸಿಐಡಿ ತನಿಖೆಗೆ ಒಪ್ಪಿಸಿ ಆದೇಶಿಸಿದರು. ಜುಲೈ 23ರಿಂದ ಸಿಐಡಿ ಐಜಿ ಪ್ರವೀಣ ಮಧುಕರ್ ಪವಾರ್ ಹಾಗೂ ಅಧಿಕಾರಿಗಳ ತಂಡ ವಾರದಿಂದ ಚಿಕ್ಕೋಡಿಯಲ್ಲಿ ಬಿಡು ಬಿಟ್ಟು ಇಂಚು ಇಂಚಾಗಿ ಮಾಹಿತಿ ಕಲೆ ಹಾಕಿ ತನಿಖೆ ನಡೆಸುತ್ತಿದ್ದಾರೆ. ತನಿಖೆ ಕೊನೆ ಹಂತಕ್ಕೆ ಬಂದು ತಲುಪಿದೆ ಎಂದು ಪೊಲೀಸ್ ಮೂಲಗಳು ಹೇಳುತ್ತಿವೆ.

### ಜಿಲ್ಲಾ ಸ್ಲಂ ಸಮಿತಿ, ವಸತಿರಹಿತರ ಹೋರಾಟ ಸಮಿತಿ ಮುಖಂಡರ ಸಭೆ

# ಸ್ಲಂ ಜನರ ಹಕ್ಕೊತ್ತಾಯಗಳಿಗೆ ಆದ್ಯತೆ ನೀಡಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ–ಬೆಟಗೇರಿ ನಗರದಲ್ಲಿ ಕೊಳಗೇರಿ ಪ್ರದೇಶಗಳ ಅಭಿವೃದ್ಧಿಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಅನೇಕ ಯೋಜನೆಗಳನ್ನು ಜಾರಿಗೆ ತಂದು, ಕೊಟ್ಯಾಂತರ ಹಣವನ್ನು ಖರ್ಚು ಮಾಡಲಾಗುತ್ತಿದೆ. ಆದರೆ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಅಭಿವೃದ್ಧಿ ಕಾಮಗಾರಿಯನ್ನು ನಡೆಸದಿರುವುದರಿಂದ ಸ್ಲಂ ಪ್ರದೇಶಗಳು ಸೌಲಭ್ಯವಂಚಿತ ಪ್ರದೇಶಗಳಾಗಿವೆ. ಸ್ಲಂ ಜನರ ಹಕ್ಕೊತ್ತಾಯಗಳಿಗೆ ಆದ್ಯತೆ ನೀಡಿ ಅಭಿವೃದ್ಧಿ ಕೈಗೊಳ್ಳದಿದ್ದಲ್ಲಿ ಗದಗ ಜಿಲ್ಲಾ ಸ್ಲಂ ಸಮಿತಿಯಿಂದ ಹೋರಾಟ ನಡೆಸಲಾಗುವುದೆಂದು ಸ್ಲಂ ಜನಾಂದೋಲನ ಕರ್ನಾಟಕ ರಾಜ್ಯ ಸಂಚಾಲಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್ ಮಾನ್ವಿ ಹೇಳಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಹಾಗೂ ವಸತಿರಹಿತರ ಹೋರಾಟ ಸಮಿತಿ ಮುಖಂಡರ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಗದಗ–ಬೆಟಗೇರಿ ನಗರದಲ್ಲಿ ಇನ್ನೂ ಅನೇಕ ಅಘೋಷಿತ ಸ್ಲಂ ಪ್ರದೇಶಗಳಿದ್ದು, ಸ್ಥಳೀಯ ನಿವಾಸಿಗಳು ನಾಗರಿಕ ಸೌಲಭ್ಯಗಳಿಂದ, ವಸತಿ ಯೋಜನೆಯಿಂದ ವಂಚಿತರಾಗಿದ್ದಾರೆ. ಜಿಲ್ಲಾಧಿಕಾರಿಗಳು ಮತ್ತು ಸ್ಲಂ ಬೋರ್ಡ್ ಅಧಿಕಾರಿಗಳು ಸ್ಲಂ ಕಾಯ್ದೆ ಅನ್ವಯ ಗುಡಿಸಲು ಪ್ರದೇಶಗಳನ್ನು ಘೋಷಣೆ ಮಾಡಿ, ಮೂಲಭೂತ ಸೌಲಭ್ಯ ಮತ್ತು ವಸತಿ ಸೌಲಭ್ಯವನ್ನು ಕಲ್ಪಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸ್ಲಂ ಸಮಿತಿ ಉಪಾಧ್ಯಕ್ಷ ರವಿಕುಮಾರ ಬೆಳಮಕರ, ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಮೆಹರುನಿಸಾ ಢಾಲಾಯತ, ಫಾತಿಮಾ ಸೈಯದ, ಚಂದ್ರಿಕಾ ರೋಣದ, ಅಫ್ರೋಜಾ ಹುಬ್ಬಳ್ಳಿ, ಸುಶೀಲಮ್ಮ ಗೊಂದರ, ಫೈರುಜಾ ಹುಬ್ಬಳ್ಳಿ, ಮೆಹರುನಿಸಾ ಡಂಬಳ, ತಿಪ್ಪಮ್ಮ ಕೊರವರ, ಕೌಸರ ಬೈರಕದಾರ, ವಿಶಾಲಕ್ಷಿ ನರೇಗಲ್ಲ, ಮೈಮುನಾ ಬೈರಕದಾರ, ಪೀರಮ್ಮ ನದಾಫ, ಜೈತುನಬಿ ಶಿರಹಟ್ಟಿ, ಲಕ್ಷ್ಮೀ ಮಣಿವಡ್ಡರ, ಶೋಭಾ ಹಿರೇಮಠ, ದಾವಲಬಿ ಕೌತಾಳ, ದಾವಲ ಯಾದಗೇರಿ ಹಾಗೂ ಗದಗ–ಬೆಟಗೇರಿ ಸ್ಲಂ ಪ್ರದೇಶದ ನೂರಾರು ಮಹಿಳೆಯರು ಸಭೆಯಲ್ಲಿ ಉಪಸ್ಥಿತರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ವೀರಭದ್ರಪ್ಪ ಬಾಗೋಡಿ ಮಾಹಿತಿ

# ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಇಂದು




**■ವಿಜಯಸಾಕ್ಷಿ ಸುದ್ದಿ, ಗದಗ**

ಬೆಟಗೇರಿಯ ಶ್ರೀ ಶಂಕರ ಶಿವಾಚಾರ್ಯ ಕುರುಹಿನಶೆಟ್ಟಿ ಸಮುದಾಯ ಭವನದಲ್ಲಿ ಜಿಲ್ಲಾ ನೇಕಾರ ಕುರುಹಿನಶೆಟ್ಟಿ ಸಂಘದ ವತಿಯಿಂದ ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಹಾಗೂ ಸಂಘದ ಉದ್ಘಾಟನಾ ಕಾರ್ಯಕ್ರಮವನ್ನು ಆ.6ರಂದು ಬೆಳಿಗ್ಗೆ 10ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಉಪಾಧ್ಯಕ್ಷ ವೀರಭದ್ರಪ್ಪ ಬಾಗೋಡಿ ಹೇಳಿದರು.

ನಗರದಲ್ಲಿ ಶನಿವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ವಿಧಾನ ಪರಿಷತ್ ಸದಸ್ಯ ಹಾಗೂ ಬಿಜೆಪಿ ರಾಜ್ಯ ಕಾರ್ಯದರ್ಶಿ ಎಸ್ ಕೇಶವ ಪ್ರಸಾದ್ ಕಾರ್ಯಕ್ರಮ ಉದ್ಘಾಟಿಸುವರು. ಗದಗ ಜಿಲ್ಲಾ ನೇಕಾರ ಕುರುಹಿನಶೆಟ್ಟಿ ಸಂಘದ ಅಧ್ಯಕ್ಷ ಗುರುಶಾಂತಪ್ಪ ದಂಡಿ ಅಧ್ಯಕ್ಷತೆ ವಹಿಸುವರು ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಎಚ್ ಕೆ ಪಾಟೀಲ, ಶಾಸಕರಾದ ಸಿ ಸಿ ಪಾಟೀಲ, ಜಿ ಎಸ್ ಪಾಟೀಲ, ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಸ್ ವಿ ಸಂಕನೂರ, ಮಾಜಿ ಶಾಸಕ ಡಿ ಆರ್ ಪಾಟೀಲ, ನಗರಸಭೆ ಅಧ್ಯಕ್ಷೆ ಉಷಾ ದಾಸರ ಪಾಲ್ಗೊಳ್ಳುವರು. ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಅಂಗವಾಗಿ ರಾಜ್ಯ ಪ್ರಶಸ್ತಿ ಪುರಸ್ಕೃತ ಮಲಕಪ್ಪ ಗಂಗಪ್ಪ ಮುಸುರಿ ಅವರನ್ನು ಸನ್ಮಾನಿಸಿ ಗೌರವಿಸಲಾಗುವುದು ಎಂದು ಮಾಹಿತಿ ನೀಡಿದರು. ಸುದ್ದಿಗೋಷ್ಠಿಯಲ್ಲಿ ಸಂಘದ ಅಧ್ಯಕ್ಷ ಗುರುಶಾಂತಪ್ಪ ದಂಡಿ, ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಕಲ್ಮನಿ, ಖಜಾಂಚಿ ಪ್ರಭುದೇವ ಬ್ಯಾಲಿಹಾಳ, ಸಹಖಜಾಂಚಿ ಮುತ್ತಪ್ಪ ಸುರಕೋಡ, ನ್ಯಾಯವಾದಿ ರಮೇಶ ಅರಹುಣಸಿ ಸೇರಿ ಅನೇಕರು ಇದ್ದರು.

ಗದಗ ಜಿಲ್ಲಾ ನೇಕಾರ ಕಾರ್ಮಿಕರ ಸಂಘ, ಜವಳಿ ಉದ್ದಿಮೆಗಳ ಸಂಘ, ತಾಲೂಕು ಹಾಗೂ ಹೋಬಳಿ ಸಂಘಗಳನ್ನು ಸ್ಥಾಪಿಸುವ ಮೂಲಕ ಸಂಘಟನಾತ್ಮಕವಾಗಿ ಕುರುಹಿನಶೆಟ್ಟಿ ಸಮುದಾಯವನ್ನು ಒಗ್ಗೂಡಿಸುವ ಕೆಲಸ ಮಾಡಲಾಗುತ್ತಿದೆ. ನೇಕಾರರ ಸಮಾಜದ ಏಳಿಗೆಗಾಗಿ, ಆರ್ಥಿಕವಾಗಿ, ಸಾಮಾಜಿಕವಾಗಿ ಸದೃಢಗೊಳಿಸಲು, ನೇಕಾರರಿಗೆ ಆಧುನಿಕ ತಂತ್ರಜ್ಞಾನ ಒದಗಿಸುವುದು ಸೇರಿದಂತೆ ಗದಗ ಭಾಗದಲ್ಲೇ ಜವಳಿ ಪಾರ್ಕ್ ಸ್ಥಾಪಿಸಲು ಸರಕಾರಕ್ಕೆ ಒತ್ತಡ ಹೇರಲು ಶ್ರಮಿಸಲಾಗುತ್ತಿದೆ.

**– ವೀರಭದ್ರಪ್ಪ ಬಾಗೋಡಿ.**
ಜಿಲ್ಲಾ ನೇಕಾರ ಕುರುಹಿನಶೆಟ್ಟಿ ಸಂಘದ ಉಪಾಧ್ಯಕ್ಷರು.

### 'ಗುರು ಗುಣ ಗಾನ' ಸಂಗೀತ, ಸಾಹಿತ್ಯ, ನೃತ್ಯ ಸಂಭ್ರಮ–2023

# ಕವಿ, ಕಲಾವಿದರಿಂದ ಅರ್ಜಿ ಆಹ್ವಾನ





**■ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯು, ಪದ್ಮಭೂಷಣ ಡಾ. ಪಂ. ಪುಟ್ಟರಾಜ ಕವಿ ಗುರುವರ್ಯರ ಪುಣ್ಯದಿನಾಚರಣೆ ಮತ್ತು ಸೇವಾ ಸಮಿತಿಯ ವಾರ್ಷಿಕೋತ್ಸವದಂಗವಾಗಿ, ಸೆಪ್ಟೆಂಬರ್ 17ರಂದು 'ಗುರು ಗುಣ ಗಾನ' (ಪುಟ್ಟರಾಜ ಸಂಗೀತ, ಸಾಹಿತ್ಯ, ನೃತ್ಯ ಸಂಭ್ರಮ–2023) ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಸಮೂಹ ಸಂಗೀತ, ನೃತ್ಯ ಪ್ರದರ್ಶನ ಸೇವೆ ಸಲ್ಲಿಸಲು ಆಸಕ್ತ ಯುವ ಉದಯೋನ್ಮುಖ ಕಲಾವಿದರು ಮತ್ತು ಗುರು ಪುಟ್ಟರಾಜರ ಕುರಿತಾದ ಸ್ವರಚಿತ ಕವನ ವಾಚಿಸಿ ಗುರು ಗುಣ ಗಾನಮಾಡಲು ಆಸಕ್ತರಾದ ಹಿರಿಯ ಮತ್ತು ಯುವ ಕವಿಗಳು ತಮ್ಮ ಹೆಸರು ನೋಂದಾಯಿಸಿಕೊಳ್ಳಲು ಆಹ್ವಾನಿಸಲಾಗಿದೆ. ಈ ಸಮಾರಂಭದಲ್ಲಿ ಭಾಗವಹಿಸಿ ಗುರು ಸೇವೆ ಸಲ್ಲಿಸಿದ ಕವಿ, ಕಲಾವಿದರಿಗೆ ಅಭಿನಂದನಾ ಪತ್ರ, ನೆನಪಿನ ಕಾಣಿಕೆ ನೀಡಿ ಗೌರವಿಸಲಾಗುವುದು.

ಕವಿಗಳು, ಪುಟ್ಟರಾಜ ಗುರುವರ್ಯರ ಕುರಿತು ರಚಿಸಿದ ಎರಡು ಕವನ, ಪರಿಚಯಪತ್ರ ಮತ್ತು ಒಂದು ಭಾವಚಿತ್ರದೊಂದಿಗೆ ಗದಗ ತಾಲೂಕಾ ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ಸಂಚಾಲಕ ಶಿವಾನಂದ ಭಜಂತ್ರಿ ಇವರ ವಾಟ್ಸಾಪ್ ಸಂಖ್ಯೆ: 86185 93247 ಕ್ಕೆ ಕಳುಹಿಸಬೇಕು. ಕಲಾವಿದರು ತಮ್ಮ ಇತ್ತೀಚಿನ ಒಂದು ಭಾವಚಿತ್ರ, ಪರಿಚಯಪತ್ರದೊಂದಿಗೆ, ಸೇವಾ ಸಮಿತಿಯ ಜಿಲ್ಲಾ ಸಂಚಾಲಕ ಶಿವು ವಾಲಿಕಾರ ಮಕ್ತುಂಪುರ ಮುಂಡರಗಿ: 99025 34116 ವಾಟ್ಸಾಪ್ ಸಂಖ್ಯೆಗೆ ಕಳುಹಿಸಬೇಕು. ಕಲಾವಿದರು ತಮ್ಮ ಗಾಯನ ಮತ್ತು ನೃತ್ಯದಲ್ಲಿ ಗುರು ಪುಟ್ಟರಾಜರ ಕುರಿತಾದ ಗೀತೆ ಅಥವಾ ಪೂಜ್ಯರು ಬರೆದ ವಚನಗಳನ್ನು ಅಳವಡಿಸಿಕೊಳ್ಳುವುದು ಕಡ್ಡಾಯ. ಹೆಸರುಗಳನ್ನು puttarajsevasamiti@gmail.com ಇಮೇಲ್ ಮೂಲಕವೂ ಕಳಿಸಬಹುದಾಗಿದೆ.

ಹೆಸರು ನೋಂದಾಯಿಸಲು ಕೊನೆಯ ದಿನಾಂಕ ಆಗಸ್ಟ್ 15ರ ಸಂಜೆ 5 ಗಂಟೆ. ಹೆಚ್ಚಿನ ಮಾಹಿತಿಗಾಗಿ–9483224660ಗೆ ಸಂಪರ್ಕಿಸ ಬಹುದಾಗಿದೆ ಎಂದು ಸಮಿತಿಯ ಜಿಲ್ಲಾಧ್ಯಕ್ಷ ಮಂಜುನಾಥ ಹಳ್ಳೂರಮಠ ಬೆಳಧಡಿ ಇವರು ಪತ್ರಿಕಾ ಪ್ರಕಟಣೆ ಮೂಲಕ ವಿನಂತಿಸಿಕೊಂಡಿದ್ದಾರೆ.

## ನೀವೂ ನಮ್ಮ ಜೊತೆ ಕೈಜೋಡಿಸಿ

**'ವಿಜಯಸಾಕ್ಷಿ'**

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
**E-mail: vijayasakshidaily@gmail.com**
**ಮೊ : 9019256545**




ಶಿವಮೊಗ್ಗದ ಕುವೆಂಪು ಯೂನಿವರ್ಸಿಟಿಯಿಂದ ಡಾಕ್ಟರೇಟ್ ಪದವಿ ಪಡೆದ ಡಾ. ಗುರುಸ್ವಾಮಿ ಕಲಕೇರಿ ಅವರನ್ನು ಅವರ ನಿವಾಸದಲ್ಲಿ ಅಭಿಮಾನಿಗಳು ಸನ್ಮಾನಿಸಿದರು.

ಆನಂದ ಕೊರ್ಲಹಳ್ಳಿ, ಸುರೇಶ ಹೊಸಮನಿ, ಜಿ.ವಿ. ಒಡವಡಗಿ, ಎಂ.ಎಸ್. ಮೇಟಿ, ಪ್ರೇಮಾ ಕಡೆಮನಿ, ಶೈಲಜಾ ಕೌತಾಳ, ಪುನೀತ್ ಸೋಲ್ಲಾಪುರ, ಪುಂಡಲೀಕ ಸೋಲಾಪುರ, ಬಸು ಭಜಂತ್ರಿ, ನಾಗೇಶ್ ಕಲಬಂಡಿ, ಬಸಮ್ಮ ಶೆಟ್ಟರ್, ಪ್ರೊ.ಹಳ್ಳಿ ಸಂಗಪ್ಪ ಕಸವಣ್ಣವರ, ದಸ್ತಗೀರಸಾಬ ಹುಡೇದ, ಚನ್ನಯ್ಯ ಹಿರೇಮಠ ಹಾಗೂ ಐ.ಕೆ ಬಲೂಚಗಿ ಇದ್ದರು.

## 'ವ್ಯಸನಮುಕ್ತ ದಿನಾಚರಣೆ' ಉಪನ್ಯಾಸ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ



ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ರವಿವಾರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1553ನೇ ಶರಣ ಸಂಗಮ ಕಾರ್ಯಕ್ರಮದಲ್ಲಿ ಬಸವಾದಿ ಶಿವಶರಣರ 'ವಚನ ತತ್ವಾನುಭವ' ಚಿಂತನೆ ಹಾಗೂ ಪೂಜ್ಯ ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಅಂಗವಾಗಿ 'ವ್ಯಸನಮುಕ್ತ ದಿನಾಚರಣೆ' ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಸದಸ್ಯ ಶರಣ ಎಸ್ ಎನ್ ಹಕಾರಿ ವಹಿಸುವರು. ಶರಣ ಸೋಮಶೇಖರ ಪುರಾಣಿಕ ವಚನ ತತ್ವಾನುಭವ ಚಿಂತನೆ ಮಾಡುವರು. ಡಿ ಸಿ ಪಾವಟೆ ಶಿಕ್ಷಣ ಮಹಾವಿದ್ಯಾಲಯದ ಉಪನ್ಯಾಸಕಿ ಶರಣೆ ಡಾ. ಗಿರಿಜಾ ಹಸಬಿ ಉಪನ್ಯಾಸ ಮಾಡುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಟ್ರ್ಯಾಕ್ ಕಾಮಗಾರಿ ಕಳಪೆ ಆರೋಪ: ತನಿಖೆಗಾಗಿ ಮನವಿ

▶▶ ಮೊದಲನೇ ಪುಟದಿಂದ

ಸರ್ಕಾರದ ಅನುದಾನ ದುರ್ಬಳಕೆಯಾಗಿರುವುದು ಕಂಡುಬರುತ್ತಿದೆ. ಸದರಿ ಕಾಮಗಾರಿಯ ಬಗ್ಗೆ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮವನ್ನು ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷ ಎ ಎಚ್ ಹೊಸಳ್ಳಿ, ರಾಜ್ಯ ಪ್ರಧಾನ ಕಾರ್ಯದರ್ಶಿ ಯೂಸೂಫ ಎ ಕೊಟ್ಟೂರ, ರೈತ ಮುಖಂಡರಾದ ಮೌಲಾಸಾಬ ಭಾವಿಕಟ್ಟಿ, ಬಾಬು ನರಸಾಪೂರ, ಗದಗ ಜಿಲ್ಲಾಧ್ಯಕ್ಷೆ ಜ್ಯೋತಿ ಕುಲಕರ್ಣಿ, ಡಿ ಎಸ್ ದೇಸಾಯಿ, ಮಾರುತಿ ಬಂಡಿವಡ್ಡರ, ಜಾಫರಅಲಿ ಸಯ್ಯದ, ಮಂಜುನಾಥ ನಾಗನೂರ, ದಾವಲಸಾಬ ನಾಗನೂರ, ಶೋಭಾ ಕಿರೇಸೂರ ಮುಂತಾದವರಿದ್ದರು.

## ಆ. 8 ರಂದು ಗೃಹಜ್ಯೋತಿ ಯೋಜನೆಗೆ ಚಾಲನೆ

▶▶ ಮೊದಲನೇ ಪುಟದಿಂದ

ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ಕ.ವಿ.ಪ್ರನಿ.ನಿ ಹಾಗೂ ಕ.ವಿ.ನಿ.ನಿ ವ್ಯವಸ್ಥಾಪಕ ನಿರ್ದೇಶಕರಾದ ಪಂಕಜ್ ಕುಮಾರ್ ಪಾಂಡೆ, ಹೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಮೊಹಮ್ಮದ್ ರೋಷನ್, (ತಾಂತ್ರಿಕ) ನಿರ್ದೇಶಕ ಶ್ರೀಕಾಂತ ಸಸಾಲಟ್ಟಿ, (ಹಣಕಾಸು) ನಿರ್ದೇಶಕ ಪ್ರಕಾಶ ಪಾಟೀಲ, ಹೆಸ್ಕಾಂ ಹುಬ್ಬಳ್ಳಿ ವಲಯ ಮುಖ್ಯ ಇಂಜನೀಯರ್ (ವಿ)ರಮೇಶ ಎಲ್. ಬೆಂಡಿಗೇರಿ, ಅಧೀಕ್ಷಕ ಇಂಜನೀಯರ್ ಶ್ರೀಮತಿ ಎಸ್.ಎಸ್.ಜಂಗೀನ, ಗದಗ ಹೆಸ್ಕಾಂ ಕಾರ್ಯ ಮತ್ತು ಪಾಲನಾ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರುಗಳಾದ ರಾಜೇಶ ಕಲ್ಯಾಣಶೆಟ್ಟಿ ಮತ್ತು ರವಿಕಿರಣ ಸರ್ವರಿಗೂ ಸ್ವಾಗತ ಕೋರಿದ್ದಾರೆ.

## ರೈತರಿಂದ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿನಲ್ಲಿ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ, ತೋಟಗಾರಿಕೆ ಇಲಾಖೆ ವತಿಯಿಂದ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವಿವಿಧ ಹಣ್ಣಿನ ಬೆಳೆಗಳಾದ ಬಾಳೆ, ದಾಳಿಂಬೆ, ಮಾವು, ಅಂಜೂರ, ಡ್ರ್ಯಾಗನ್ ಫ್ರೂಟ್, ಅವಕಾಡೋ, ರಾಮಭೂತಾನ, ನೇರಳೆ, ಹುಣಸೆ, ಉನ್ನತ ತಂತ್ರಜ್ಞಾನದಲ್ಲಿ ಬೆಳೆದ ಹೈಬ್ರಿಡ್ ತರಕಾರಿ ಬೆಳೆಗಳಾದ ಟೋಮೋಟೊ, ಬದನೆ, ಮೆಣಸಿನಕಾಯಿ, ಹೂವಿನ ಬೆಳೆಗಳಾದ ಗುಲಾಬಿ, ಸುಗಂಧರಾಜ, ಸೇವಂತಿಗೆ, ಗೈಲಾರ್ಡಿಯಾ, ಮಲ್ಲಿಗೆ, ಕನಕಾಂಬರ, ಬೆಳೆಗಳಿಗೆ ಸಹಾಯಧನ ನೀಡುವ ಕಾರ್ಯಕ್ರಮವಿದೆ.

ಸಾಮಾಜಿಕ ಕೃಷಿ ಹೊಂಡ, ವೈಯಕ್ತಿಕ ಕೃಷಿ ಹೊಂಡ, ಪ್ಲಾಸ್ಟಿಕ್ ಹೊದಿಕೆ, ಸಮಗ್ರ ಪೋಷಕಾಂಶ ನಿರ್ವಹಣೆ, ಸಮಗ್ರ ಕೀಟ ನಿರ್ವಹಣೆಗಾಗಿ, ಸಹಾಯಧನ ನೀಡಲು ಅವಕಾಶವಿರುತ್ತದೆ. ಉನ್ನತ ತಂತ್ರಜ್ಞಾನ ಪಡೆಯಲು ಇಚ್ಛಿಸುವ ತೋಟಗಾರಿಕೆ ರೈತರಿಗೆ, ತರಬೇತಿ ಕಾರ್ಯಕ್ರಮ, ರಾಜ್ಯದೊಳಗಡೆ ಪ್ರಗತಿ ಪರ ರೈತರ ತೋಟಗಳ ಕ್ಷೇತ್ರ ಭೇಟಿಯನ್ನು ಇಲಾಖೆಯಿಂದ ಏರ್ಪಡಿಸಲಾಗುತ್ತದೆ. ಹಣ್ಣು, ಹೂವು, ತರಕಾರಿ ಮತ್ತು ಇತರೆ ತೋಟಗಾರಿಕೆ ಬೆಳೆಗಳ ಕೋಯ್ಲೋತ್ತರ ನಿರ್ವಹಣೆ, ಪ್ಯಾಕಿಂಗ್, ಗ್ರೇಡಿಂಗ್ ಮಾಹಿತಿಗಾಗಿ, ಪ್ಯಾಕ್ ಹೌಸ್, ಕಡಿಮೆ ವೆಚ್ಚದ ಈರುಳ್ಳಿ ಸಂಗ್ರಹಣ ಘಟಕ, ಹಣ್ಣು, ಹೂವು, ತರಕಾರಿ ಮಾರಾಟಕ್ಕಾಗಿ ತಳ್ಳುವ ಗಾಡಿಗಾಗಿ ಶೇ50 ರಷ್ಟು ಸಹಾಯಧನವನ್ನು ನೀಡುವ ಕಾರ್ಯಕ್ರಮವಿರುತ್ತದೆ.

ಆಸಕ್ತ ರೈತರು ಉತಾರ, ಖಾತೆ ಉತಾರ, ಫೋಟೋ, ಮಣ್ಣು ಮತ್ತು ನೀರಿನ ಪರೀಕ್ಷಾ ವರದಿ (ಹಣ್ಣು ಹೂವು ತರಕಾರಿ ಬೆಳೆಗಳಿಗೆ) ಹಾಗೂ ಅಗತ್ಯ ದಾಖಲೆಗಳೊಂದಿಗೆ ಅರ್ಜಿಯನ್ನು ತೋಟಗಾರಿಕೆ ಕಚೇರಿಗೆ ಸಲ್ಲಿಸಬಹುದಾಗಿದೆ. ಅರ್ಜಿಯನ್ನು ಸಲ್ಲಿಸಲು ಆಗಸ್ಟ್ 16 ಕೊನೆಯ ದಿನಾಂಕವಾಗಿದ್ದು, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಶಿರಹಟ್ಟಿ ರವರು ಪ್ರಕಟಣೆಯಲ್ಲಿ ಕೋರಿದ್ದಾರೆ.

### ಸಾಧಕರಿಗೆ ಸನ್ಮಾನ, ಕಾರ್ಯಾಗಾರ ಉದ್ಘಾಟನಾ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸದ್ವಿಚಾರಗಳ ಕೊರತೆಯೇ ಅಶಾಂತಿಗೆ ಕಾರಣ

■ ವಿಜಯಸಾಕ್ಷಿ ಸುದ್ದಿ, ಕುಣಿಗಲ್



ಮಾನವ ಜೀವನ ಬಹಳಷ್ಟು ಒತ್ತಡಗಳಿಂದ ಕೂಡಿದೆ. ಜೀವನದಲ್ಲಿ ಅಗತ್ಯವಿರುವಷ್ಟು ಶಾಂತಿ, ನೆಮ್ಮದಿಯಿಲ್ಲ. ಇದಕ್ಕೆ ಸಂಸ್ಕಾರ, ಸದ್ವಿಚಾರಗಳ ಕೊರತೆ ಕಾರಣವೆಂದರೆ ತಪ್ಪಾಗದು. ಅತ್ಯಾಧುನಿಕ ಜೀವನ ಮತ್ತು ವೈಚಾರಿಕತೆಯಿಂದಾಗಿ ಜೀವನದಲ್ಲಿ ಧಾರ್ಮಿಕ ಪ್ರಜ್ಞೆ, ವಿಧಿ-ವಿಧಾನಗಳ ಆಚರಣೆ ಕುಂಠಿತಗೊಳ್ಳುತ್ತಿವೆ. ಇಂಥ ಸಂದರ್ಭದಲ್ಲಿ ಈ ನಾಡಿನ ಅರ್ಚಕ, ಪುರೋಹಿತರು ಭಕ್ತರ ಕಲ್ಯಾಣ ಬಯಸುವ ಅವಶ್ಯಕತೆಯಿದೆ.

– ಡಾ. ವೀರಸೋಮೇಶ್ವರ ಜಗದ್ಗುರುಗಳು.
ಶ್ರೀ ರಂಭಾಪುರಿ ಪೀಠ, ಬಾಳೆಹೊನ್ನೂರು.

ಭಾರತ ಧರ್ಮ ಭೂಮಿಯಲ್ಲಿ ಯೋಗ, ಆಧ್ಯಾತ್ಮ, ಧರ್ಮ ಮೊದಲಾದವುಗಳಿಗೆ ಬಹಳಷ್ಟು ಪ್ರಾಮುಖ್ಯತೆ ಕೊಟ್ಟಿದ್ದಾರೆ. ಇವುಗಳ ಆಚರಣೆಯಿಂದ ಜೀವನದಲ್ಲಿ ಶಾಂತಿ, ನೆಮ್ಮದಿ ದೊರಕಲು ಸಾಧ್ಯ. ನೀತಿ-ನಿಬಂಧನೆಗಳು ಮಾನವ ಜೀವನದ ಶ್ರೇಯೋಭಿವೃದ್ಧಿಗೆ ಸಹಕಾರಿಯಾಗಿವೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ತಾಲೂಕಿನ ಎಡೆಯೂರು ಕ್ಷೇತ್ರದ ಶ್ರೀಮತಿ ಮೈತ್ರಾದೇವಿ ಯಡಿಯೂರಪ್ಪ ಸ್ಮಾರಕ ಭವನದಲ್ಲಿ ಅಖಿಲ ಕರ್ನಾಟಕ ವೀರಶೈವ ಅರ್ಚಕ ಪುರೋಹಿತರ ನಿಸ್ವಾರ್ಥ ಸೇವಾ ಸಂಘದ ಪ್ರಥಮ ವಾರ್ಷಿಕೋತ್ಸವ, ಸಾಧಕರಿಗೆ ಸನ್ಮಾನ ಹಾಗೂ ಕಾರ್ಯಾಗಾರ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಂಘ ನಿರ್ಮಾಣಗೊಂಡು ಪ್ರಥಮ ವಾರ್ಷಿಕೋತ್ಸವ ಸಾಧಕರಿಗೆ ಸನ್ಮಾನ, ಪ್ರಶಸ್ತಿ ಪ್ರದಾನ ಹಾಗೂ ಎರಡು ದಿನಗಳ ಕಾಲ ಕಾರ್ಯಾಗಾರ ಹಮ್ಮಿಕೊಂಡಿರುವುದು ಸ್ತುತ್ಯ ಕಾರ್ಯವೆಂದು ಹರುಷ ವ್ಯಕ್ತಪಡಿಸಿದ ಜಗದ್ಗುರುಗಳು, ಅರ್ಚಕ ಪುರೋಹಿತ ವರ್ಗದವರು ಶಿಸ್ತು, ಸಂಯಮ, ಶಾಸ್ತ್ರ ನಿಷ್ಠೆ, ಧರ್ಮಾಚರಣೆ ಅನುಸರಿಸಿ ಭಕ್ತರಿಗೆ ಸನ್ಮಾರ್ಗ ದರ್ಶನದಲ್ಲಿ ಬೆಳಕು ತೋರಬೇಕಾಗಿದೆ ಎಂದರು.

ಸಮಾರಂಭ ಉದ್ಘಾಟಿಸಿದ ಎಡೆಯೂರು ಬಾಳೆಹೊನ್ನೂರು ಖಾಸಾ ಶಾಖಾ ಮಠದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ವೀರಶೈವ ಧರ್ಮ ಸಕಲ ಜೀವಾತ್ಮರಿಗೆ ಒಳಿತನ್ನೇ ಬಯಸುತ್ತಾ ಬಂದಿದೆ. ಧರ್ಮದಲ್ಲಿ ಏನೆಲ್ಲ ಆಧ್ಯಾತ್ಮ ಸಂಪತ್ತು ಇದ್ದರೂ ಆಚರಣೆಯಿಂದ ವಿಮುಖರಾದ ಕಾರಣ ಅನೇಕ ಸಂಕಷ್ಟಗಳನ್ನು ಎದುರಿಸಬೇಕಾಗಿದೆ. ನಾಡಿನ ಸಂಸ್ಕೃತಿ, ಸಭ್ಯತೆ ಮತ್ತು ಪರಂಪರೆ ಅರಿವು ಆದರ್ಶಗಳು ಬೆಳೆಯಲು ಇಂಥ ಕಾರ್ಯಾಗಾರದ ಅವಶ್ಯಕತೆಯಿದೆ ಎಂದರು. ನುಗ್ಗೇಹಳ್ಳಿ ಪುರವರ್ಗ ಮಠದ ಡಾ. ಮಹೇಶ್ವರ ಶಿವಾಚಾರ್ಯ ಸ್ವಾಮಿಗಳು ಶಿಬಿರಾರ್ಥಿಗಳಿಗೆ ಶಾಸ್ತ್ರ ಜ್ಞಾನದ ಅರಿವನ್ನು ಮೂಡಿಸಿದರು. ಕವಲೇದುರ್ಗ ಭುವನಗಿರಿ ಮಠದ ಮರುಳಸಿದ್ಧ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಅರ್ಚಕ ಮತ್ತು ಪುರೋಹಿತರು ಜನ ಕಲ್ಯಾಣಕ್ಕಾಗಿ ಇಂಥ ಶಿಬಿರಗಳ ಮೂಲಕ ಜೀವನ ಉತ್ಸಾಹವನ್ನು ತುಂಬುವ ಕೆಲಸ ಮಾಡಬೇಕಾಗಿದೆ. ಸಾತ್ವಿಕ ಸಮಾಜ ನಿರ್ಮಾಣ ಎಲ್ಲರ ಗುರಿಯಾಗಬೇಕಾಗಿದೆ ಎಂದರು.

ಶತಮಾನ ಕಂಡ ಆದರ್ಶ ಮಹಿಳೆ ಮೈಸೂರಿನ ನೀಲಮ್ಮ ಮತ್ತು ವೈದಿಕ, ಜ್ಯೋತಿಷ್ಯ ನಿಪುಣರಾದ ಬಳ್ಳಾರಿಯ ಜೆ ಎಂ ಪಂಪಾಪತಿ ಶಾಸ್ತ್ರಿಗಳವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಿದರು. ವೀರಶೈವ ವೇದ ಮೂಲದ ಬಿಎ ಮತ್ತು ಎಂಎ ವಿದ್ಯಾರ್ಥಿಗಳು ಬೆಳ್ಳಿ ಪದಕ ಒಳಗೊಂಡ ಪ್ರತಿಭಾ ಪುರಸ್ಕಾರ ಪಡೆದರು. ಎಡೆಯೂರಿನ ಬಸವರಾಧ್ಯರು, ಶಿವಮೂರ್ತಿ ಶಾಸ್ತ್ರಿಗಳು, ಬಿ ವಿ ಗಿರೀಶ, ಅರುಣ, ನಾಗಭೂಷಣ ಆರಾಧ್ಯರು, ವೈ ಎಸ್ ಸಿದ್ದಲಿಂಗ ಪ್ರಭು ಹಾಗೂ ಸಂಘದ ಎಲ್ಲಾ ಸದಸ್ಯರು ಉಪಸ್ಥಿತರಿದ್ದರು. ಸಂಘದ ಅಧ್ಯಕ್ಷ ಗಣೇಶಾರಾಧ್ಯ ಪ್ರಾಸ್ತಾವಿಕ ನುಡಿಗಳನ್ನಾದರು. ಡಾ. ಮಹಂತೇಶ ದುಂಡಯ್ಯ ಆರಾಧ್ರಿಮಠ ನಿರೂಪಿಸಿದರು.

## ಉತ್ತಮ ಗುಣಮಟ್ಟದ ಶಿಕ್ಷಣಕ್ಕೆ ಮೆಚ್ಚುಗೆ

▶▶ ಮೊದಲನೇ ಪುಟದಿಂದ

ಹುಲಕೋಟಿಯ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯಕ್ಕೆ ಭೇಟಿ ನೀಡಿ ಅಲ್ಲಿರುವ ಸಿಬ್ಬಂದಿಗಳು ಹಾಗೂ ಅಗತ್ಯವಿರುವ ಮೂಲಭೂತ ಸೌಕರ್ಯಗಳ ಕುರಿತು ಪರಿಶೀಲಿಸಿದರು. ಆಸ್ಪತ್ರೆಯಲ್ಲಿ ಉತ್ತಮ ಚಿಕಿತ್ಸೆ ವಸತಿ ನಿಲಯದಲ್ಲಿ ವಿಧ್ಯಾರ್ಥಿಗಳಿಗೆ ಗುಣಮಟ್ಟದ ಆಹಾರ ಲಭ್ಯವಾಗಬೇಕು. ಈ ಕುರಿತು ಮೇಲಾಧಿಕಾರಿಗಳು ನಿಯಮಿತವಾಗಿ ಪರಿಶೀಲನೆ ನಡೆಸಬೇಕೆಂದು ಸೂಚಿಸಿದರು.

ಬಿಂಕದಕಟ್ಟಿ ಗ್ರಾಮದಲ್ಲಿನ ಡಿಜಿಟಲ್ ಗ್ರಂಥಾಲಯ, ಬಾಪೂಜಿ ಸೇವಾ ಕೇಂದ್ರ, ಆರೋಗ್ಯ ಉಪ ಕೇಂದ್ರ, ಪಶು ಆಸ್ಪತ್ರೆಗಳಿಗೆ ಭೇಟಿ ನೀಡಿ ಅಲ್ಲಿನ ಕಾರ್ಯವೈಖರಿ ಬಗ್ಗೆ ಮಾಹಿತಿ ಪಡೆದರು. ಸರ್ಕಾರಿ ಯೋಜನೆಗಳ ಹಾಗೂ ಸೌಲಭ್ಯಗಳು ಅರ್ಹರಿಗೆ ತಲುಪಿಸುವ ಮೂಲಕ ಆರ್ಥಿಕ ಬಲವರ್ಧನೆಗೆ ಮುಂದಾಗುವಂತೆ ತಿಳಿಸಿದರು.

ತದನಂತರ ಗದಗ ನಗರದ ಗಂಗಿಮಡಿ ವಸತಿ ಯೋಜನೆಯ ಮನೆಗಳನ್ನು ವೀಕ್ಷಿಸಿದರು.

### ಪಿಂಕ್ ಶೌಚಾಲಯ

ಹುಲಕೋಟಿಯ ಕೆ.ಎಚ್.ಪಾಟೀಲ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ನಿರ್ಮಾಣಗೊಂಡಿರುವ ಪಿಂಕ್ ಶೌಚಾಲಯದ ಪರಿಕಲ್ಪನೆ ಕುರಿತು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರಿಂದ ಮಾಹಿತಿ ಪಡೆದು ಶೌಚಾಲಯ ನಿರ್ಮಾಣದ ಉದ್ದೇಶ ಹಾಗೂ ಬಾಲಕಿಯರು ಶೌಚಾಲಯ ಬಳಕೆ ಕುರಿತು ಅಭಿಪ್ರಾಯ ಪಡೆದರು. ಪಿಂಕ್ ಶೌಚಾಲಯ ಪರಿಕಲ್ಪನೆಯು ಉತ್ತಮ ಯೋಜನೆಯಾಗಿದ್ದು ಬಾಲಕಿಯರಿಗೆ ಶೌಚಾಲಯ ಬಳಕೆ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.

ಶಹರದ ವಕಾರ ಸಾಲುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು ಗುಣಮಟ್ಟದ ಕಾಮಗಾರಿಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳು ಮುಂದಾಗಬೇಕು. ಸರ್ಕಾರದ ಅನುದಾನ ಸದ್ಬಳಕೆ ಆಗುವಂತೆ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ಸೂಚಿಸಿದರು.

ಈ ಸಂದರ್ಭದಲ್ಲಿ ಹುಲಕೋಟಿ ಗ್ರಾಮ ಪಂಚಾಯತ ಅಧ್ಯಕ್ಷೆ ನಾಗರತ್ನ ಬೆಳ್ಳೊಳ್ಳಿಮಠ, ಸದಸ್ಯರಾದ ಸಿ.ಬಿ.ಕರಿಕಟ್ಟೆ, ಮೋಹನ ದುರಗಣ್ಣವರ, ಏಕನಾಥ ಕರಿರಾಯನಗೌಡರ, ಸ್ಥಳೀಯ ಜನಪ್ರತಿನಿಧಿಗಳು, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಉಪವಿಭಾಗಾಧಿಕಾರಿ ವೆಂಕಟೇಶ ನಾಯ್ಕ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ನಿರ್ಮಿತಿ ಕೇಂದ್ರದ ವ್ಯವಸ್ಥಾಪಕ ಗಂಗಾಧರ ಶಿರೋಳ, ಪಿ.ಆರ್.ಇ.ಡಿ. ಕಾರ್ಯಪಾಲಕ ಅಭಿಯಂತರ ಶಿವಾನಂದ ಗೌಡರ, ತಾಲೂಕು ಆರೋಗ್ಯಾಧಿಕಾರಿ ಡಾ.ಪ್ರೀತಮ್ ಖೋತ, ಶಿಶು ಅಭಿವೃದ್ಧಿ ಅಧಿಕಾರಿ ಹುಲಿಗೆಮ್ಮ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ರವಿ ಗುಂಜಿಕರ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ, ಪೌರಾಯುಕ್ತ ರಮೇಶ ಸುಣಗಾರ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

## ಕಕ್ಷಿದಾರರಿಗೆ ಶೀಘ್ರ ನ್ಯಾಯದಾನ ವ್ಯವಸ್ಥೆ

▶▶ ಮೊದಲನೇ ಪುಟದಿಂದ

ಮಾಡುವ ಹಾಗೂ ಪ್ರಕರಣಗಳನ್ನು 3 ಕ್ಕಿಂತ ಹೆಚ್ಚು ಬಾರಿ ಮುಂದೂಡದಂತೆ ತಿದ್ದುಪಡಿ ಮಾಡಲಾಗಿದ್ದು, ಇದಕ್ಕೆ ಶೀಘ್ರದಲ್ಲಿ ರಾಷ್ಟಪತಿಗಳ ಅಂಕಿತ ದೊರೆಯಲಿದೆ ಎಂದರು.

ಪ್ರಸ್ತುತ ಅನೇಕ ಸೇವೆಗಳನ್ನು ಸಾರ್ವಜನಿಕರ ಮನೆ ಬಾಗಿಲಿಗೆ ತಲುಪಿಸಲಾಗುತ್ತಿದ್ದು, ನ್ಯಾಯದಾನ ವ್ಯವಸ್ಥೆಯನ್ನೂ ಸಹ ಸಾರ್ವಜನಿಕರ ಮನೆ ಬಾಗಲಿಗೆ ತಲುಪಿಸಿ, ಶೀಘ್ರ ಮತ್ತು ಕಡಿಮೆ ವೆಚ್ಚದಲ್ಲಿ ನ್ಯಾಯ ದೊರಕಿಸುವ ಉದ್ದೇಶದಿಂದ ಇದೇ ವರ್ಷ ರಾಜ್ಯದಲ್ಲಿ ಗ್ರಾಮ ನ್ಯಾಯಾಲಯಗಳನ್ನು ಆರಂಭಿಸಲಾಗುತ್ತಿದ್ದು, 2 ರಿಂದ 3 ಪಂಚಾಯತ್‌ಗಳಿಗೆ ಒಂದರಂತೆ 2000 ಗ್ರಾಮ ನ್ಯಾಯಾಲಯಗಳನ್ನು ರಾಜ್ಯಾದ್ಯಂತ ಹಂತಹಂತವಾಗಿ ಆರಂಭಿಸಲಾಗುವುದು ಎಂದರು.

ರಾಜ್ಯದಲ್ಲಿ ವ್ಯಾಜ್ಯ ಮುಕ್ತ ಗ್ರಾಮಗಳನ್ನು ನಿರ್ಮಾಣ ಮಾಡುವ ಕಲ್ಪನೆ ಇದ್ದು, ಪ್ರತಿ ಗ್ರಾಮದಲ್ಲಿ ಕನಿಷ್ಠ ಇಬ್ಬರು ಉತ್ತಮ ಕೌನ್ಸಲಿಂಗ್ ಮಾಡುವ ವ್ಯಕ್ತಿಗಳಿದ್ದಲ್ಲಿ ಇದು ಸಾಧ್ಯವಾಗಲಿದೆ. ಸುಪ್ರೀಂ ಕೋರ್ಟ್‌ನಿಂದ ಕೆಳ ನ್ಯಾಯಾಲಯಗಳವರೆಗೆ ಅನೇಕ ಪ್ರಕರಣಗಳು ಅವಧಿ ಮೀರಿದ್ದರೂ ಇತ್ಯರ್ಥಗೊಂಡಿಲ್ಲ. ವಕೀಲರು ಆದಷ್ಟು ಶೀಘ್ರದಲ್ಲಿ ಕಕ್ಷಿದಾರರಿಗೆ ನ್ಯಾಯ ದೊರಕಿಸಬೇಕು. ವ್ಯಾಜ್ಯಗಳು ಬೇಗ ಇತ್ಯರ್ಥಗೊಂಡಲ್ಲಿ ಸಮಾಜದಲ್ಲಿ ಸಂತೋಷ ಸಮಾಧಾನ ನೆಲೆಗೊಳ್ಳಲಿದೆ ಎಂದರು.

ಬ್ರಹ್ಮಾವರದಲ್ಲಿ ಪ್ರಸ್ತುತ ನೂತನವಾಗಿ ಸೃಜಿಸಲ್ಪಟ್ಟ ಬ್ರಹ್ಮಾವರ ಸಂಚಾರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯದ ಬದಲು ಖಾಯಂ ನ್ಯಾಯಾಲಯ ಆರಂಭಿಸುವ ಬಗ್ಗೆ ಮನವಿ ಬಂದಿದ್ದು, ಈ ಕುರಿತು ನ್ಯಾಯಾಂಗ ಇಲಾಖೆ ಮೂಲಕ ಅಗತ್ಯ ಕಡತ ಸಲ್ಲಿಕೆಯಾದಲ್ಲಿ 48 ಗಂಟೆಯೊಳಗೆ ಅನುಮತಿ ನೀಡಲಾಗುವುದು ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಮಾತನಾಡಿ, ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ವಕೀಲ ವೃತ್ತಿಯಲ್ಲಿ ತೊಡಗಿಕೊಳ್ಳಬೇಕು. ಮಹಿಳಾ ವಕೀಲರು ಕಾನೂನು ಮೂಲಕ ಮಾತ್ರವಲ್ಲದೇ ಹೃದಯದ ಭಾವನೆಗಳ ಮೂಲಕ ವಾದ ಮಾಡಿ ಕಕ್ಷಿದಾರರಿಗೆ ಶೀಘ್ರದಲ್ಲಿ, ನ್ಯಾಯ ಕೊಡಿಸಬಲ್ಲರು. ವಿದ್ಯಾವಂತ ಮತ್ತು ಪ್ರಜ್ಞಾವಂತರ ಜಿಲ್ಲೆಯಾದ ಉಡುಪಿಯಲ್ಲಿ ಹೆಚ್ಚು ಮಹಿಳಾ ವಕೀಲರು ರೂಪುಗೊಳ್ಳಬೇಕು.

ಬ್ರಹ್ಮಾವರ ವ್ಯಾಪ್ತಿಯಲ್ಲಿ 4000 ಕ್ಕೂ ಅಧಿಕ ವ್ಯಾಜ್ಯಗಳಿದ್ದು, ಇಲ್ಲಿಗೆ ಖಾಯಂ ನ್ಯಾಯಾಲಯ ಆರಂಭಿಸುವ ಬಗ್ಗೆ ಕಾನೂನು ಸಚಿವರು ಭರವಸೆ ನೀಡಿದ್ದಾರೆ. ನಮ್ಮ ದೇಶದ ಕಾನೂನು ಮತ್ತು ಸಂವಿಧಾನ ಬಗ್ಗೆ ಇಡೀ ವಿಶ್ವದಲ್ಲಿ ಮೆಚ್ಚುಗೆ ಇದೆ. ಕ್ಷಕಿದಾರರಿಗೆ ಶೀಘ್ರ ನ್ಯಾಯ ದೊರಕಿಸುವ ಮೂಲಕ ಕಾನೂನು ಮತ್ತು ಸಂವಿಧಾನ ಉದ್ದೇಶ ಸಾಕಾರಗೊಳ್ಳಬೇಕು ಎಂದರು. ಕರ್ನಾಟಕ ಉಚ್ಚ ನ್ಯಾಯಾಲಯ ನ್ಯಾಯಮೂರ್ತಿ ಹಾಗೂ ಉಡುಪಿ ಜಿಲ್ಲೆ ಆಡಳಿತಾತ್ಮಕ ನ್ಯಾಯಮೂರ್ತಿ ಎಂ. ಐ. ಅರುಣ್ ಅಧ್ಯಕ್ಷತೆ ವಹಿಸಿದ್ದರು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಶಾಂತವೀರ ಶಿವಪ್ಪ ಸ್ವಾಗತಿಸಿದರು. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಕೆ. ಜಯಪ್ರಕಾಶ್ ಹೆಗ್ಡೆ, ವಿಧಾನಪರಿಷತ್ ಸದಸ್ಯ ಕೋಟ ಶ್ರೀನಿವಾಸ ಪೂಜಾರಿ, ಲೋಕೋಪಯೋಗಿ ಇಲಾಖೆ, ಕೇಂದ್ರ ವಲಯ, ಶಿವಮೊಗ್ಗದ ಪ್ರಭಾರ ಮುಖ್ಯ ಅಭಿಯಂತರರು (ಸಂ. ಮತ್ತು ಕ.) ಕೆ. ಜಿ. ಜಗದೀಶ್, ಬ್ರಹ್ಮಾವರ ವಕೀಲರ ಸಂಘದ ಅಧ್ಯಕ್ಷ ಕಾಡೂರು ಪ್ರವೀಣ್ ಶೆಟ್ಟಿ, ಕಾರ್ಯದರ್ಶಿ ಶ್ರೀಪಾದ ರಾವ್ ಮತ್ತಿತರರು ಉಪಸ್ಥಿತರಿದ್ದರು

## ಬಿಎಸ್‌ಎಫ್ ಯೋಧನಿಗೆ ಸ್ವಾಗತ, ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಬಿಎಸ್‌ಎಫ್ ಗಡಿ ಭದ್ರತಾ ಪಡೆಯಲ್ಲಿ 22 ವರ್ಷಗಳ ಕಾಲ ಭಾರತಾಂಬೆಯ ಸೇವೆಗೈದು, ಶತ್ರುಗಳ ಗುಂಡಿಗೆ ಎದೆಯೊಡ್ಡಿ, ಭಾರತದ ಎಲ್ಲಾ ಗಡಿಯಲ್ಲಿ ಸೇವೆ ಸಲ್ಲಿಸಿ, ನಿವೃತ್ತಿಯಾಗಿ ಅವರ ಸ್ವಗ್ರಾಮಕ್ಕಾಗಮಿಸಿದ ಶಂಭುಲಿಂಗಯ್ಯ ಎಸ್ ಎಂ ಅವರಿಗೆ ಗದಗ ಜಿಲ್ಲೆಯ ಮಾಜಿ ಹಾಗೂ ಹಾಲಿ ಪ್ಯಾರಾ ಮಿಲಿಟರಿ ಯೋಧರ ಕಲ್ಯಾಣ ಸಂಘ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ನಗರಸಭಾಧ್ಯಕ್ಷೆ ಉಷಾ ದಾಸರ, ಮಾಜಿ ಹಾಗೂ ಹಾಲಿ ಪ್ಯಾರಾ ಮಿಲಿಟರಿ ಯೋಧರ ಕಲ್ಯಾಣ ಸಂಘದ ಅಧ್ಯಕ್ಷ ನಾಗರಾಜ ಕುಂದರಗಿ, ಕಾರ್ಯದರ್ಶಿ ಬಸಯ್ಯ ಹಿರೇಮಠ, ಬೋಧರಾಜ್ ಮರಬದ, ಮಹಾಂತೇಶ್ ಲಕ್ಕುಂಡಿ, ಮಲ್ಲಯ್ಯ ಕರವೀರಮಠ, ಗೌಸ್ ಮೋಹಿದ್ದೀನ, ಶಂಕರಗೌಡ ತಮ್ಮನಗೌಡ್ರು, ಕುಲಕರ್ಣಿ, ವೀರೇಶ, ಪ್ರವೀಣ ಚಕ್ರದ, ಪ್ಯಾರಾ ಮಿಲಿಟರಿ ಮಾಜಿ ಸೈನಿಕರು, ಶಂಭುಲಿಂಗಯ್ಯ ಅವರ ಗೆಳೆಯರ ಬಳಗ ಹಾಗೂ ಅವರ ಪರಿವಾರದವರು ಉಪಸ್ಥಿತರಿದ್ದರು.

## ಬಿವಿವಿ ಶಾಲೆಯ 38ನೇ ಸಂಸ್ಥಾಪನಾ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ




ಪ್ರತಿ ವರ್ಷ ಬಾಲ ವಿನಾಯಕ ವಿದ್ಯಾನಿಕೇತನದಲ್ಲಿ ಹೊಸದೊಂದು ವಿಚಾರವನ್ನು ಅನುಷ್ಠಾನಗೊಳಿಸಲಾಗುತ್ತದೆ. ಅದೇ ರೀತಿ, ವಿದ್ಯಾರ್ಥಿಗಳು ಕೂಡ ತಮ್ಮ ಜೀವನದಲ್ಲಿ ಪ್ರತಿದಿನವೂ ಹಿಂದಿನ ದಿನಕ್ಕಿಂತ ಉತ್ತಮರಾಗಲು ಯೋಚಿಸಬೇಕೆಂದು ಶಾಲೆಯ ನಿರ್ದೇಶಕರಾದ ವಿನಾಯಕ ಆರ್ ಅಭಿಪ್ರಾಯಪಟ್ಟರು.

ನಗರದ ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯಲ್ಲಿ 38ನೇ ಶಾಲಾ ಸಂಸ್ಥಾಪನಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಇಂಜಿನಿಯರ್ ಅಲ್ಲಾಭಕ್ಷ ನೀಲಿಯವರು ಮಾತನಾಡಿ, ತಮಗೆ ಬಹು ಮಹಡಿಯ ಕಟ್ಟಡ ಕಾಮಗಾರಿಯನ್ನು ನೀಡಿದಕ್ಕೆ ಸಂತಸ ವ್ಯಕ್ತಪಡಿಸಿ, ಈ ಕಾರ್ಯಕ್ರಮದಲ್ಲಿ ತಮ್ಮ ಸೇವೆಯನ್ನು ಸ್ಮರಿಸಿ, ಸನ್ಮಾನಿಸಿದ್ದು ಸಂತಸ ತಂದಿದೆ ಎಂದರು. ಶಾಲಾ ಕಟ್ಟಡ ನಿರ್ಮಿಸಿದ ಅಭಿಯಂತರರಾದ ಎಂ ಆರ್ ಪಾಟೀಲ್, ಅಲ್ಲಾಭಕ್ಷ ನೀಲಿ, ಜೀಷಾನ್ ಗುಳಗುಂದಿ ಅವರಿಗೆ ಬಿವಿವಿ ರತ್ನ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ವಿದ್ಯುತ್ ಗುತ್ತಿಗೆದಾರ ಅನ್ವರ ಹುಸೇನ ನವಲಗುಂದ ಅವರಿಗೆ ಬಿವಿವಿ ಶ್ರೀ ಪ್ರಶಸ್ತಿ ಮತ್ತು ಶಾಲೆಯ ಸಹಾಯಕ ಈರಣ್ಣ ಗಾಣಿಗೇರ ಅವರ ಸೇವೆಯನ್ನು ಸ್ಮರಿಸಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಎಸ್ ರವಿ, ಇಎಲ್‌ಸಿ ಮುಖ್ಯಸ್ಥರಾದ ಮಲ್ಲಿಕಾ ಆರ್, ಪ್ಲೇಹೋಮ್‌ನ ಮುಖ್ಯಸ್ಥರಾದ ಗಂಗಾ, ಪ್ರಾಚಾರ್ಯ ವಿ ಎಮ್ ಅಡ್ನೂರ್, ಉಪ ಪ್ರಾಚಾರ್ಯ ಪಿ ಜಿ ಬ್ಯಾಳಿ, ಶಿಕ್ಷಕರು ಮತ್ತು ಶಿಕ್ಷಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮುಖ್ಯ ಅತಿಥಿಗಳಾದ ಎಂ ಆರ್ ಪಾಟೀಲ್ ದೀಪ ಬೆಳಗಿಸಿ ಕಾರ್ಯಕ್ರಮ ಉದ್ಘಾಟಿಸಿದರು. ಪಂಡಿತ ಪುಟ್ಟರಾಜ ಗವಾಯಿಗಳ ಸಂಗೀತ ತಂಡದವರು ಪ್ರಾರ್ಥಿಸಿದರು. ನಂದಿನಿ ಮಲ್ಲಪ್ಪನವರ್ ಸ್ವಾಗತಿಸಿದಳು. ತುಷಾರ್ ಅಬ್ಬಿಗೇರಿ ಮತ್ತು ಸ್ಫೂರ್ತಿ ಯಾದವಾಡ್ ನಿರೂಪಿಸಿದರು. ಲಕ್ಷ್ಮೀ ಬ್ಯಾಕೋಡ ವಂದಿಸಿದಳು. ಶ್ರೇಯಾ ಯಮಗೌಳಿ ಪಠ್ಯೇತರ ಸ್ಪರ್ಧೆಗಳ ಚಟುವಟಿಕೆಗಳಲ್ಲಿ ಜಯಗಳಿಸಿದವರ ಪ್ರಶಸ್ತಿ ವಿತರಣಾ ಕಾರ್ಯಕ್ರಮ ನಿರೂಪಿಸಿದರು.

## 'ಶಂಖನಾದ' ಕಾರ್ಯಕ್ರಮಕ್ಕೆ ಚಾಲನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲೆಯ ನೂತನ ಜಿಲ್ಲಾ ಕಾರ್ಯಾಲಯದಲ್ಲಿ ಸಾಮಾಜಿಕ ಜಾಲತಾಣ ಮತ್ತು ಮಾಹಿತಿ ತಂತ್ರಜ್ಞಾನ ತಂಡದಿಂದ 'ಶಂಖನಾದ' ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಮುತ್ತಣ್ಣ ಲಿಂಗನಗೌಡ್ರ, ವಿಭಾಗ ಸಂಘಟನಾ ಪ್ರಧಾನ ಕಾರ್ಯದರ್ಶಿ ರಾಜಕುಮಾರ ಬಸವಾ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಮಾಧವ ಗಣಚಾರಿ, ಶಿದ್ರಾಮೊಪ್ಪ ಮೊರಬದ, ನಾಗರಾಜ ಕುಲಕರ್ಣಿ, ಬೂದಪ್ಪ ಹಳ್ಳಿ, ರವಿ ಕರಿಗಾರ, ಪಕ್ಕೀರೇಶ ರಟ್ಟಿಹಳ್ಳಿ, ನಿಂಗಪ್ಪ ಮಣ್ಣೂರ, ಬಸವರಾಜ ಬಿಳಿಮಗ್ಗದ, ಬಸವರಾಜ ಬಡಿಗೇರ, ವೀರಸಂಗಯ್ಯ ಮೊಕಾಶಿ, ದೇವಪ್ಪ ಗೊಟೂರ, ಸಂತೋಷ ಅಕ್ಕಿ, ಜಿಲ್ಲೆಯ ಸಾಮಾಜಿಕ ಜಾಲತಾಣ ಮಂಡಲ ಸಂಚಾಲಕರು, ಸಹ-ಸಂಚಾಲಕರು ಉಪಸ್ಥಿತರಿದ್ದರು.

## ಆಸಕ್ತ ರೈತರಿಂದ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

2023-24ನೇ ಸಾಲಿನಲ್ಲಿ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ, ತೋಟಗಾರಿಕೆ ಇಲಾಖೆ ವತಿಯಿಂದ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಶಿರಹಟ್ಟಿಯ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಸುರೇಶ ಕುಂಬಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿವಿಧ ಹಣ್ಣಿನ ಬೆಳೆಗಳಾದ ಬಾಳೆ, ದಾಳಿಂಬೆ, ಮಾವು, ಅಂಜೂರ, ಡ್ರ್ಯಾಗನ್ ಫ್ರುಟ್, ಅವಕಾಡೋ, ರಾಂಬುಟಾನ್, ನೇರಳೆ, ಹುಣಸೆ, ಉನ್ನತ ತಂತ್ರಜ್ಞಾನದಲ್ಲಿ ಬೆಳೆದ ಹೈಬ್ರಿಡ್ ತರಕಾರಿ ಬೆಳಗಳಾದ ಟೊಮೆಟೋ, ಬದನೆ, ಮೆಣಸಿನಕಾಯಿ, ಹೂವಿನ ಬೆಳೆಗಳಾದ ಗುಲಾಬಿ, ಸುಗಂಧರಾಜ, ಸೇವಂತಿಗೆ, ಗೈಲಾರ್ಡಿಯಾ, ಮಲ್ಲಿಗೆ, ಕನಕಾಂಬರ ಬೆಳೆಗಳಿಗೆ ಸಹಾಯಧನ ನೀಡುವ ಕಾರ್ಯಕ್ರಮವಿದೆ. ಅಲ್ಲದೇ ಸಾಮಾಜಿಕ ಕೃಷಿ ಹೊಂಡ, ವೈಯಕ್ತಿಕ ಕೃಷಿ ಹೊಂಡ, ಪ್ಲಾಸ್ಟಿಕ್ ಹೊದಿಕೆ, ಸಮಗ್ರ ಪೋಷಕಾಂಶ ನಿರ್ವಹಣೆ, ಸಮಗ್ರ ಕೀಟ ನಿರ್ವಹಣೆಗಾಗಿ ಸಹಾಯಧನ ನೀಡಲು ಅವಕಾಶವಿರುತ್ತದೆ.

ಉನ್ನತ ತಂತ್ರಜ್ಞಾನ ಪಡೆಯಲು ಇಚ್ಛಿಸುವ ತೋಟಗಾರಿಕೆ ರೈತರಿಗೆ, ತರಬೇತಿ ಕಾರ್ಯಕ್ರಮ, ರಾಜ್ಯದೊಳಗಡೆ ಪ್ರಗತಿಪರ ರೈತರ ತೋಟಗಳ ಕ್ಷೇತ್ರ ಭೇಟಿಯನ್ನು ಇಲಾಖೆಯಿಂದ ಏರ್ಪಡಿಸಲಾಗುತ್ತದೆ. ಹಣ್ಣು, ಹೂವು, ತರಕಾರಿ ಮತ್ತು ಇತರೆ ತೋಟಗಾರಿಕೆ ಬೆಳೆಗಳ ಕೊಯ್ಲೋತ್ತರ ನಿರ್ವಹಣೆ, ಪ್ಯಾಕಿಂಗ್, ಗ್ರೇಡಿಂಗ್ ಮಾಹಿತಿಗಾಗಿ, ಪ್ಯಾಕ್‌ಹೌಸ್, ಕಡಿಮೆ ವೆಚ್ಚದ ಈರುಳ್ಳಿ ಸಂಗ್ರಹಣ ಘಟಕ, ಹಣ್ಣು, ಹೂವು, ತರಕಾರಿ ಮಾರಾಟಕ್ಕಾಗಿ ತಳ್ಳುವ ಗಾಡಿಗಾಗಿ ಶೇ.50ರಷ್ಟು ಸಹಾಯಧನವನ್ನು ನೀಡುವ ಕಾರ್ಯಕ್ರಮವಿರುತ್ತದೆ.

ಆಸಕ್ತ ರೈತರು ಈ ಕಚೇರಿಗೆ ಉತಾರ, ಖಾತೆ ಉತಾರ, ಫೋಟೋ, ಮಣ್ಣು ಮತ್ತು ನೀರಿನ ಪರೀಕ್ಷಾ ವರದಿ (ಹಣ್ಣು, ಹೂವು ತರಕಾರಿ ಬೆಳೆಗಳಿಗೆ) ಹಾಗೂ ಅಗತ್ಯ ದಾಖಲೆಗಳೊಂದಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಅರ್ಜಿಯನ್ನು ಸಲ್ಲಿಸಲು ಆಗಸ್ಟ್ 16 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಶಿರಹಟ್ಟಿ ಇವರನ್ನು ಸಂಪರ್ಕಿಸಲು ಕೋರಿದ್ದಾರೆ.

ಕೃಷಿ ಅಧಿಕಾರಿಗಳಿಂದ ರೈತರ ಜಮೀನುಗಳಿಗೆ ಭೇಟಿ /ಹತೋಟಿಗೆ ಸಲಹೆ

# ಮೆಕ್ಕೆಜೋಳ ಬೆಳೆಗೆ ಲದ್ದಿಹುಳು ಕಾಟ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪ್ರಸಕ್ತ ವರ್ಷ ತಾಲೂಕಿನಲ್ಲಿ ಮುಂಗಾರು ಮಳೆ ವಿಳಂಬವಾಗಿದ್ದರಿಂದ, ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳ ಬಹುತೇಕ ರೈತರು ಹೆಚ್ಚಿನ ಪ್ರಮಾಣದಲ್ಲಿ ಮೆಕ್ಕೆಜೋಳವನ್ನು ಬಿತ್ತನೆ ಮಾಡಿದ್ದು, ಈ ಬೆಳೆಗಳಿಗೆ ಇದೀಗ ಪ್ರಾಥಮಿಕ ಹಂತದಲ್ಲಿಯೇ ಲದ್ದಿ ಹುಳು ಕೀಟದ ಬಾಧೆ ಕಾಡುತ್ತಿದೆ. ಮುಂಜಾಗ್ರತೆಗಾಗಿ ರೈತರು ವಹಿಸಬೇಕಾದ ಕ್ರಮಗಳ ಕುರಿತು ಕೃಷಿ ಇಲಾಖೆಯ ಅಧಿಕಾರಿಗಳು ಶಿರಹಟ್ಟಿ ತಾಲೂಕಿನ ತಾರೀಕೊಪ್ಪ, ಕೆರಳ್ಳಿ, ಬನ್ನಿಕೊಪ್ಪ, ವರವಿ, ಕಡಕೋಳ ಗ್ರಾಮದ ರೈತರ ಜಮೀನುಗಳಿಗೆ ತೆರಳಿ ಬೆಳೆಗಳ ಪರಿಶೀಲನೆ ನಡೆಸಿ ಮಾಹಿತಿಯನ್ನು ನೀಡುತ್ತಿದ್ದಾರೆ.

ಪ್ರಸಕ್ತ ವರ್ಷ ತಾಲೂಕಿನಲ್ಲಿ ಮೇ ಮತ್ತು ಜೂನ್ ತಿಂಗಳಲ್ಲಿ ಮಳೆಯಾಗದೇ, ಜುಲೈ ತಿಂಗಳಲ್ಲಿ ಮಳೆ ಆಗಿದ್ದರಿಂದ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳಲ್ಲಿ 46 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಮೆಕ್ಕೆಜೋಳ ಬಿತ್ತನೆ ಮಾಡಲಾಗಿದೆ. ಇದೀಗ ಮೆಕ್ಕೆಜೋಳ ಸರಾಸರಿ 30-45 ದಿನಗಳ ಬೆಳೆಯಾಗಿದ್ದು, ಶೇ.2%ರಷ್ಟು ಪ್ರಾಥಮಿಕ ಹಂತದಲ್ಲಿ ಬೆಳೆಗಳಿಗೆ ಲದ್ದಿ ಹುಳು ಆಕ್ರಮಿಸುತ್ತಿದೆ. ಇದರ ಹತೋಟಿಗೆ ಇಮಾಮೆಕ್ಟೀನ್ ಬೆಂಜೋಯಿಟ್‌ನ್ನು 8-10ಮಿ.ಲಿ ಪ್ರತಿ 15 ಲೀಟರ್ ನೀರಿನಲ್ಲಿ ಬೆರೆಸಿ ಸಿಂಪರಣೆ ಮಾಡಬೇಕು.

ಮರಳು ಅಥವಾ ಮಣ್ಣಿನ ಪುಡಿಯನ್ನು ಗಿಡದ ಸುಳಿಯಲ್ಲಿ ಹಾಕುವುದು. ಸ್ಪೈನೋಪಾಡ್ 0.3 ಮಿಲೀ. ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪರಣೆ ಮಾಡಬೇಕು. ಕ್ಲೋರಾಂಟ್ರಾನಿಲಿಪೋಲ್ 0.4 ಮಿಲೀ. ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪರಣೆ ಮಾಡಬೇಕು. ಜೊತೆಗೆ ದ್ರವರೂಪದ ನ್ಯಾನೋ ಯೂರಿಯಾ ಹಾಗೂ ನ್ಯಾನೋ ಡಿಎಪಿ ಗೊಬ್ಬರವನ್ನು ಪ್ರತಿ ಲೀಟರ್ ನೀರಿಗೆ 4 ಮಿಲೀ. ಯಂತೆ ಬೆರೆಸಿ ಸಿಂಪಡಿಸಬೇಕು. ಇದರಿಂದ ಬೆಳೆಗಳ ಬೆಳವಣಿಗೆ ಸರಿಯಾಗುವುದರೊಂದಿಗೆ ಹೆಚ್ಚಿನ ಇಳುವರಿ ಪಡೆಯಬಹುದಾಗಿದೆ ಎಂದು ಕೃಷಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಸಹಾಯಕ ಕೃಷಿ ನಿರ್ದೇಶಕ ರೇವಣೆಪ್ಪ ಮನಗೂಳಿ, ಲದ್ದಿ ಹುಳು ಬಾಧೆ ನಿಯಂತ್ರಿಸಲು ರೈತರು ಇಲಾಖೆಯ ಸಲಹೆಗಳನ್ನು ಪಾಲಿಸಬೇಕು. ಇದರಿಂದ ಹೆಚ್ಚಿನ ಇಳುವರಿ ಪಡೆಯಲು ಸಾಧ್ಯವಾಗುತ್ತದೆ. ಶಿರಹಟ್ಟಿ-ಲಕ್ಷ್ಮೇಶ್ವರ ರೈತ ಸಂಪರ್ಕ ಕೇಂದ್ರಗಳಲ್ಲಿ ರಿಯಾಯಿತಿ ದರದಲ್ಲಿ ಇಮಾಮೆಕ್ಟೀನ್ ಬೆಂಜೋಯಿಟ್ ರಾಸಾಯನಿಕ ಮಾತ್ರ ಲಭ್ಯವಿದ್ದು, ಉಳಿದವುಗಳನ್ನು ರೈತರು ಮಾರುಕಟ್ಟೆಯಲ್ಲಿ ಖರೀದಿಸಿ ಸಿಂಪಡಿಸಬಹುದಾಗಿದೆ ಎಂದರು.

ಹಣಕಾಸು, ಹಳೆಯ ವೈಷ್ಯಮ್ಯದ ಹಿನ್ನೆಲೆ: ಎರಡು ಗುಂಪುಗಳ ನಡುವೆ ಮಾರಾಮಾರಿ

# ಸಾರ್ವಜನಿಕವಾಗಿಯೇ ಬಡಿದಾಡಿ ಆಸ್ಪತ್ರೆ ಸೇರಿದರು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಣಕಾಸಿನ ವಿಚಾರದ ನೆಪ ಮತ್ತು ಹಳೆಯ ವೈಷಮ್ಯದ ಹಿನ್ನೆಲೆಯಲ್ಲಿ ನಡೆದ ಜಗಳ ವಿಕೋಪಕ್ಕೆ ತಿರುಗಿ, ಎರಡು ಗುಂಪುಗಳು ಸಾರ್ವಜನಿಕವಾಗಿ ಮಾರಕಾಸ್ತ್ರಗಳಿಂದ ಬಡಿದಾಡಿ-ಕೊಂಡ ಘಟನೆ ಶುಕ್ರವಾರ ರಾತ್ರಿ ಪಟ್ಟಣದಲ್ಲಿ ನಡೆದಿದೆ.

ಶುಕ್ರವಾರ ಸಂಜೆ ಹೊಸ ಬಸ್ ನಿಲ್ದಾಣದ ಹತ್ತಿರ ಮೈನುದ್ದಿನ ತಹಶೀಲದಾರ ಹಾಗೂ ಸಬೀಲ ಬಂಕಾಪುರ ಹಣಕಾಸಿನ ವಿಚಾರವಾಗಿ ಹೊಡೆದಾಡಿಕೊಂಡಿದ್ದಾರೆ. ಮೈನುದ್ದೀನ ಎಂಬಾತ ಸಬೀಲನಿಗೆ ಈ ಹಿಂದೆ ಕೊಟ್ಟಿದ್ದ ದುಡ್ಡನ್ನು ವಾಪಸ್ ಕೇಳಿದಾಗ, ಮಾತಿಗೆ ಮಾತು ಬೆಳೆದು ಪರಸ್ಪರ ಹೊಡೆದಾಡಿಕೊಂಡಿದ್ದಾರೆ. ಆಡೂರರ ಹೊಟೇಲ್‌ನಲ್ಲಿ ಕೆಲಸ ಮಾಡುವ ಸಬೀಲ್ ಬಂಕಾಪುರ ಮೈನುದ್ದಿನ್ ತಹಶೀಲದಾರನಿಗೆ 10 ಸಾವಿರ ರೂ ಕೊಡಬೇಕಿದ್ದು, ಹಣ ಕೇಳುವ ನೆಪದಲ್ಲಿ ಮೈನುದ್ದಿನ ಸಬೀಲನಿಗೆ ಸಾರ್ವಜನಿಕವಾಗಿಯೇ ಹೊಡೆದಿದ್ದಾನೆ. ಈ ವೇಳೆ ಸಬೀಲನ ಪರವಾಗಿ ಆಡೂರ ಕುಟುಂಬದ ಸದಸ್ಯನೋರ್ವ ಪೊಲೀಸ್ ಠಾಣೆಗೆ ದೂರು ನೀಡಿ, ಬಳಿಕ ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗೆ ಕರೆದುಕೊಂಡು ಬಂದಿದ್ದಾನೆ.

ಎರಡೂ ಕುಟುಂಬದ ನಡುವೆ ಮೊದಲಿನಿಂದಲೂ ವೈಷಮ್ಯವಿರುವ ಕಾರಣದಿಂದ, ಸರ್ಕಾರಿ ಆಸ್ಪತ್ರೆಯಲ್ಲಿಯೇ ಜಮಾಯಿಸಿದ ಆಡೂರ ಮತ್ತು ತಹಶೀಲದಾರ ಕುಟುಂಬದ 8-10 ಜನರ ಗುಂಪು, ಸಿನಿಮೀಯ ರೀತಿಯಲ್ಲಿ ಮಾರಕಾಸ್ತ್ರಗಳಿಂದ ಮಾರಾಮಾರಿ ನಡೆಸಿದ್ದಾರೆ. ಸುದ್ದಿ ತಿಳಿಯುತ್ತಿದ್ದಂತೆಯೇ ಸ್ಥಳಕ್ಕಾಗಮಿಸಿದ ಸಿಪಿಐ ವಿಕಾಸ ಲಮಾಣಿ ಎರಡೂ ಕಡೆಯವರಿಗೆ ಲಾಠಿ ರುಚಿ ತೆ-ೋರಿಸಿ ಪರಿಸ್ಥಿತಿ ನಿಯಂತ್ರಿಸಿದ್ದಾರೆ. ಹೊಡೆದಾಟದಲ್ಲಿ ಗಾಯಗೊಂಡ ಸಬೀಲ ಬಂಕಾಪುರ, ನೌಶಾದ್



ಮೈನುದ್ದೀನ ಆಡೂರ, ಸತ್ತಾರ ಅಲಿಯಾಸ್ ಅಬ್ದುಲ್‌ಸತ್ತಾರ ಆಡೂರ, ಸುಲೇಮಾನ್ ಆಡೂರ ಕಿಮ್ಸ್‌ನಲ್ಲಿ ಚಿಕಿತ್ಸೆಗೊಳಗಾಗಿದ್ದಾರೆ. ಇನ್ನೊಂದು ಬಣದ ಮೈನುದ್ದಿನ ತಹಶೀಲದಾರ, ಇರ್ಫಾನ್ ತಹಶೀಲದಾರ, ಶಾಬುದ್ದಿನ ತಹಶೀಲದಾರ ಗಾಯಗೊಂಡಿದ್ದು, ಜಿಮ್ಸ್‌ನಲ್ಲಿ ಚಿಕಿತ್ಸೆಗೊಳಗಾಗಿದ್ದಾರೆ.

ಈ ಕುರಿತು ಪಿಎಸ್‌ಐ ಯೂಸೆಫ್ ಜಮೂಲಾ 109/2023 ಕಲಂ 143, 147, 148, 323, 307, 504, ರೆ.ವಿ 149 ಐಪಿಸಿ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ತಹಶೀಲದಾರ ಹಾಗೂ ಆಡೂರ ಕುಟುಂಬಸ್ಥರ ನಡುವೆ ಹಳೆಯ ದ್ವೇಷದ ಹಿನ್ನಲೆಯಲ್ಲಿ ಆಗಾಗ ಜಗಳ ನಡೆಯುತ್ತಲೇ ಇದೆ. ಶುಕ್ರವಾರ ರಾತ್ರಿಯೂ ಎರಡೂ ಕುಟುಂಬದವರು ಹೊಡೆದಾಡುತ್ತಿದ್ದಂತೆಯೇ ಸ್ಥಳಕ್ಕೆ ದೌಡಾಯಿಸಿದ ಸಿಪಿಐ, ಗುಂಪನ್ನು ಚದುರಿಸಿದ್ದಾರೆ. ಎರಡೂ ಕುಟುಂಬದಲ್ಲಿ ರೌಡಿ ಶೀಟರ್‌ಗಳಿದ್ದು ಆಡೂರ ಕುಟುಂಬದ ಓರ್ವ ಗಡಿಪಾರು ಶಿಕ್ಷೆ ಅನುಭವಿಸಿ ವಾಪಸ್ ಬಂದಿದ್ದಾನೆ. ಸಾರ್ವಜನಿಕವಾಗಿ ಪರಸ್ಪರ ಹೊಡೆದಾಡಿಕೊಂಡಿರುವ ಬಗ್ಗೆ ದೂರು ದಾಖಲಿಸಿಕೊಳ್ಳಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿ ತನಿಖೆ ಕೈಗೊಂಡು, ತಪ್ಪಿತಸ್ಥರ ಮೇಲೆ ಕಠಿಣ ಕ್ರಮ ಕೈಗೊಳ್ಳಲಾಗುವುದು.

– ಬಿ ಎಸ್ ನೇಮಗೌಡ.
ಪೊಲೀಸ್ ವರಿಷ್ಠಾಧಿಕಾರಿ.

## ಪ್ರತಿದೂರು ದಾಖಲು

ಹಳೆಯ ದ್ವೇಷ ಸಾಧಿಸುತ್ತಾ ಬಂದಿರುವ ಶಾಬುದ್ದೀನ ತಂದೆ ಮಲಿಕಸಾಬ ತಹಶೀಲ್ದಾರ, ಮೈನುದ್ದೀನ ತಹಶೀಲ್ದಾರ, ಇರ್ಫಾನ್ ತಹಶೀಲ್ದಾರ, ಬರಕತ್ ಅಲಿ ಡೋಂಗರಿ ಮುಳಗುಂದ, ಮಕ್ಬೂಲಸಾಬ ಮುಳಗುಂದ ಹಾಗೂ ಇತರರು ಸೇರಿ ನಮ್ಮ ಜೊತೆಗೆ ಆಗಾಗ ತಂಟೆ-ತಕರಾರು, ದ್ವೇಷ ಇಟ್ಟುಕೊಂಡು ಶುಕ್ರವಾರ ರಾತ್ರಿ ಲಕ್ಷೇಶ್ವರದ ಸರಕಾರಿ ಆಸ್ಪತ್ರೆ ಎದುರಿಗೆ ಮಾರಕಾಸ್ತ್ರಗಳಿಂದ ಹಲ್ಲೆ ಮಾಡಿ, ಕೊಲೆಗೆ ಯತ್ನಿಸಿದ್ದಾರೆ ಎಂದು ನೌಶಾದ್ ತಂದೆ ಮೈನುದ್ದೀನ ಆಡೂರ ಎಂಬುವರು ಪ್ರತಿದೂರು ನೀಡಿದ್ದು, 0110/2023, ಕಲಂ 143, 147, 148, 323, 324, 307, 504, ರೆ.ವಿ 149 ಐಕಅ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

# ದಲಿತರ ಅನುದಾನ ದುರ್ಬಳಕೆ ಖಂಡನೀಯ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪಜಾ/ಪಪಂ ಅನುದಾನವನ್ನು ದುರ್ಬಳಕೆ ಮಾಡುತ್ತಿರುವ ಸರ್ಕಾರದ ನಡೆ ಖಂಡನೀಯವೆಂದು ದಲಿತ ವಿದ್ಯಾರ್ಥಿ ಪರಿಷತ್‌ನ ಶಿರಹಟ್ಟಿ ತಾಲೂಕಾ ಘಟಕದ ಅಧ್ಯಕ್ಷ ಸಂಜೀವ ದೊಡ್ಡಮನಿ ಆರೋಪಿಸಿದ್ದಾರೆ.

ರಾಜ್ಯ ಕಾಂಗ್ರೆಸ್ ಸರ್ಕಾರ ತಮ್ಮ ಚುನಾವಣಾ ಪ್ರಣಾಳಿಕೆಯಲ್ಲಿ ಜನತೆಗೆ ನೀಡಿರುವ 5 ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭಿವೃದ್ಧಿಗಾಗಿ ಮೀಸಲಿರುವ ಗಿರಿಜನ ಉಪಯೋಜನೆಯ 11 ಸಾವಿರ ಕೋಟಿ ರೂ ಮೊತ್ತವನ್ನು ಗ್ಯಾರಂಟಿ ಯೋಜನೆಗೆ ಬಳಸಿಕೊಂಡು ತಮ್ಮ ರಾಜಕೀಯ ಅಸ್ತಿತ್ವ ಉಳಿಸಿಕೊಳ್ಳಲು ದಲಿತರನ್ನು ಹರಕೆಯ ಕುರಿಗಳಂತೆ ಬಳಕೆ ಮಾಡಿಕೊಳ್ಳುತ್ತಿರುವುದು ದುರಂತವಾಗಿದೆ.

ಕಳೆದ ತಿಂಗಳಲ್ಲಿ ಸರ್ಕಾರವೇ ಎಲ್ಲ ಸಚಿವರ ಸಭೆ ಕರೆದು ಎಸ್‌ಸಿ/ಎಸ್‌ಟಿ ಅಭಿವೃದ್ಧಿಗಾಗಿ ಮೀಸಲಿರುವ ಅನುದಾನ ಕೇವಲ ದಲಿತ ಜನಾಂಗದ ಅಭಿವೃದ್ಧಿಗೆ ಮಾತ್ರ ಮೀಸಲಾಗಬೇಕು. ಬೇರೆ ಯೋಜನೆಗಳಿಗೆ ಬಳಕೆಯಾಗಬಾರದೆಂದು ಕಾಯ್ದೆಯನ್ನು ಜಾರಿಗೊಳಿಸಿ ಆದೇಶವನ್ನೂ ಹೊರಡಿಸಿದ್ದರು. ಆದರೆ ಈ ಆದೇಶವನ್ನು ಗಾಳಿಗೆ ತೂರಿ ದಲಿತರ ಹಣವನ್ನು ದುರುಪಯೋಗಪಡಿಸಿಕೊಳ್ಳುತ್ತಿರುವುದು ಖಂಡನೀಯ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಬೈಕ್‌ಗೆ ಗೂಡ್ಸ್ ವಾಹನ ಡಿಕ್ಕಿ; ಬೈಕ್ ಸವಾರ ಸ್ಥಳದಲ್ಲೇ ಸಾವು



■ವಿಜಯಸಾಕ್ಷಿ ಸುದ್ದಿ, ರೋಣ

ಅತಿ ವೇಗವಾಗಿ ಬಂದ ಟಾಟಾ ಗೂಡ್ಸ್ ವಾಹನ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದ ಪರಿಣಾಮವಾಗಿ ಸವಾರ ಸ್ಥಳದಲ್ಲಿಯೇ ಮೃತಪಟ್ಟ ದಾರುಣ ಘಟನೆ ಶನಿವಾರ ಜರುಗಿದೆ.

ರೋಣ ತಾಲೂಕಿನ ಮಲ್ಲಾಪೂರ ಗ್ರಾಮದ ಡಾಬಾವೊಂದರ ಬಳಿ ಈ ಅಪಘಾತ ಜರುಗಿದ್ದು, ಬೈಕ್ ಸವಾರ ಬೆಳವಣಿಕಿ ಗ್ರಾಮದ ಬಸವರಾಜ್ ಕುಸುಗಲ್ (39) ಎಂಬಾತ ಸ್ಥಳದಲ್ಲಿಯೇ ಮೃತಪಟ್ಟ ದುರ್ದೈವಿಯಾಗಿದ್ದಾನೆ.

ಟಾಟಾ ಗೂಡ್ಸ್ ವಾಹನವು ರೋಣದಿಂದ ಬೆಳವಣಿಕಿ ಗ್ರಾಮದ ಕಡೆಗೆ ಅತಿ ವೇಗವಾಗಿ ಬಂದು ಎದುರಿಗೆ ಬರುತ್ತಿದ್ದ ಬೈಕ್‌ಗ ಡಿಕ್ಕಿಯಾಗಿದೆ. ಟಾಟಾ ಗೂಡ್ಸ್ ವಾಹನದ ಚಾಲಕನ ನಿರ್ಲಕ್ಷ್ಯದಿಂದ ಈ ಅಪಘಾತ ಜರುಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸುದ್ದಿ ತಿಳಿದು ರೋಣ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ರೋಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಪ್ರಕರಣ ನಡೆದಿದೆ.

# ಮಠಗಳು ಶಿಕ್ಷಣದೊಂದಿಗೆ ಸಂಸ್ಕೃತಿಯನ್ನು ಕಲಿಸುತ್ತಿವೆ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಮಠದ ಸಾತ್ವಿಕ ವಾತಾವರಣದಲ್ಲಿ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳು ಸದ್ಗುಣಗಳ ಸಾಧಕರಾಗುತ್ತಾರೆ. ಕರ್ನಾಟಕದ ಅನೇಕ ಮಠಗಳು ಅನ್ನದಾನ, ವಿದ್ಯಾದಾನ, ವಸತಿ ದಾನದ ಮೂಲಕ ಉತ್ತಮ ಸಂಸ್ಕೃತಿಯನ್ನು, ನೈತಿಕ ಶಿಕ್ಷಣವನ್ನು ಕಲಿಸುತ್ತಿವೆ ಎಂದು ಎಸ್‌ಯುಜೆಎಂ ಕಾಲೇಜಿನ ಪ್ರಾಚಾರ್ಯ ಹೆಚ್ ಮಲ್ಲಿಕಾರ್ಜುನ ಅಭಿಪ್ರಾಯಪಟ್ಟರು.

ಅವರು ತಾಲೂಕಿನ ನೀಲಗುಂದ ವಿರಕ್ತಮಠದ ಶಾಲೆಯ ಬಡ ವಿದ್ಯಾರ್ಥಿಗಳಿಗೆ ತಮ್ಮ ಜನ್ಮದಿನದ ಪ್ರಯುಕ್ತ ಪುಸ್ತಕಗಳನ್ನು ಮತ್ತು ಲೇಖನ ಸಾಮಾಗ್ರಿಗಳನ್ನು ವಿತರಿಸಿ ಮಾತನಾಡಿ, ಶಿಕ್ಷಣ ಕ್ಷೇತ್ರದಲ್ಲಿ ಮಠಗಳ ಕೊಡುಗೆ ಅಪಾರವಾಗಿದೆ. ಅನೇಕ ಮಠಗಳು ಜಾತಿಬೇಧವಿಲ್ಲದೆ ಸರ್ವರಿಗೂ ಶಿಕ್ಷಣ ನೀಡುವ ಗುರಿ ಹೊಂದಿವೆ. ಮಠಗಳಲ್ಲಿ ಕಲಿತು ಉನ್ನತ ಹುದ್ದೆಯಲ್ಲಿರುವವರು ಮಠಗಳಲ್ಲಿ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ ಸಹಾಯ ಮಾಡಬೇಕು. ಪ್ರಾಚೀನ ಕಾಲದಿಂದಲೂ ಮಠಗಳು ಶಿಕ್ಷಣಕ್ಕೆ ಹೆಚ್ಚು ಒತ್ತು ಕೊಟ್ಟಿವೆ. ನೀಲಗುಂದ ವಿರಕ್ತ ಮಠದ ಚನ್ನಬಸವ ಶಿವಯೋಗಿ ಸ್ವಾಮೀಜಿ ಸಾಮಾಜಿಕ ನ್ಯಾಯಕ್ಕಾಗಿ ಅನೇಕ ಜನಪರ ಹೋರಾಟಗಳನ್ನು ಮಾಡುತ್ತಾ ಜನಮಾನಸದಲ್ಲಿ ಉಳಿದಿದ್ದಾರೆ ಎಂದರು.

ನೀಲಗುಂದ ವಿರಕ್ತ ಮಠದ ಚನ್ನಬಸವ ಶಿವಯೋಗಿ ಸ್ವಾಮೀಜಿ ಮಾತನಾಡಿ, ಪ್ರಾಚಾರ್ಯರಾದ ಹೆಚ್ ಮಲ್ಲಿಕಾರ್ಜುನ ಸಾಮಾಜಿಕವಾಗಿ, ಧಾರ್ಮಿಕವಾಗಿ, ಶೈಕ್ಷಣಿಕವಾಗಿ ಚಿಂತನಪರ ವಿಚಾರವಾದಿಗಳು. ಸಾಮಾಜಿಕ ಪ್ರಜ್ಞೆ ಅವರಿಗಿದೆ. ಕಾರಣ, ಕಡು ಬಡತನದಲ್ಲಿರುವ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳಿಗೆ ಅವರ ಸಾಧನೆಯನ್ನು ಗುರುತಿಸಿ ಪ್ರೋತ್ಸಾಹ ನೀಡುತ್ತಿರುವುದು ಸಂತಸದ ವಿಚಾರ. ಅವರ ಸಾಂಸ್ಕೃತಿಕ, ಸಾಹಿತ್ಯಿಕ ಸೇವೆ ಅಮೋಘವಾದುದು ಎಂದರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಹೇಮಣ್ಣ ಎಸ್, ಜಿ ಇ ರಮೇಶ, ಲಲಿತಮ್ಮ, ಯಶೋಧ, ನಾಗರಾಜ, ಸುಮಾ, ನವಜ್ಯೋತಿ ಸಂಸ್ಥೆಯ ಅಧ್ಯಕ್ಷರಾದ ಸಪ್ನಾ ಮಲ್ಲಿಕಾರ್ಜುನ, ಹೃತಿಕ್ ಹೆಚ್, ಹೆಚ್ ಮಂಜುನಾಥ ಮುಂತಾದವರು ಉಪಸ್ಥಿತರಿದ್ದರು.

# ಕುಡುಒಕ್ಕಲಿಗರ ಸಂಘದ ಪೂರ್ವಭಾವಿ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಕರ್ನಾಟಕ ಕುಡುಒಕ್ಕಲಿಗರ ಸಂಘದ ಪೂರ್ವಭಾವಿ ಸಭೆ ಆ. 6, ರವಿವಾರ ಮುಂಜಾನೆ 11 ಗಂಟೆಗೆ ಬಿಂಕದಕಟ್ಟಿ ಪ್ರಾಣಿ ಸಂಗ್ರಹಾಲಯದ ಹತ್ತಿರವಿರುವ ಕುಡುಒಕ್ಕಲಿಗರ ಭವನದಲ್ಲಿ ನಡೆಯಲಿದೆ.

ಸ್ವಾತಂತ್ರ್ಯೋತ್ಸವ ಆಚರಿಸುವ ಬಗ್ಗೆ ಹಾಗೂ ಸಂಘದ ವಾರ್ಷಿಕ ಮಹಾಸಭೆಯನ್ನು ಆಯೋಜಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಗುವದು. ಸದಸ್ಯರು ಸಕಾಲಕ್ಕೆ ಆಗಮಿಸಿ, ಸಲಹೆ-ಸೂಚನೆ ನೀಡಬೇಕೆಂದು ಸಂಘದ ಕಾರ್ಯದರ್ಶಿ ಶರಣಪ್ಪ ದಿಡ್ಡಿಮನಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿಗಳ ವಿತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ಮಾಜಿ ಪದಾಧಿಕಾರಿ, ಹಾಲಿ ಸದಸ್ಯರು, ವ್ಯಾಪಾರಸ್ಥರೂ ಆದ ಪ್ರಕಾಶ ರಾಯ್ಕರ್ ತಮ್ಮ ಜನ್ಮದಿನಾಚರಣೆಯನ್ನು ಶುಕ್ರವಾರ ತಾಲೂಕಿನ ಕಳಸಾಪೂರ ಗ್ರಾಮದ ಸರಕಾರಿ ಶಾಲಾ ಮಕ್ಕಳಿಗೆ ನೋಟ್‌ಬುಕ್, ಡ್ರಾಯಿಂಗ್ ಬುಕ್, ಕಲರ್ ಬಾಕ್ಸ್, ಕಂಪಾಸ್ ಬಾಕ್ಸ್, ಪೆನ್ಸಿಲ್‌ಗಳನ್ನು ವಿತರಿಸುವ ಮೂಲಕ ತಮ್ಮ ಜನ್ಮದಿನವನ್ನು ಆಚರಿಸಿಕೊಂಡರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ರಮೇಶ ಶಿಗ್ಲಿ ಔಪಚಾರಿಕವಾಗಿ ಮಾತನಾಡಿ, ಕ್ಲಬ್‌ನ ಹಿರಿಯ ಸದಸ್ಯರಾಗಿರುವ ಪ್ರಕಾಶ ರಾಯ್ಕರ್ ಅವರು ಯಾವಾಗಲೂ ಸಮಾಜಮುಖಿಯಾಗಿ ಕಾರ್ಯ ಮಾಡುತ್ತ ಬಂದಿದ್ದು, ಶಿಕ್ಷಣ ಪ್ರೇಮಿಗಳಾದ ಅವರು ತಮ್ಮ ಜನ್ಮದಿನವನ್ನು ಕ್ಲಬ್ ಮೂಲಕ ಮಕ್ಕಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಿರುವುದು ಶ್ಲಾಘನೀಯ ಎಂದರು.

ಕ್ಲಬ್ ಕಾರ್ಯದರ್ಶಿ ಪ್ರವೀಣ ವಾರಕರ, ಸದಸ್ಯರಾದ ಎಂ ಕೆ ಕುಷ್ಟಗಿ, ರಘು ಮೇರವಾಡೆ, ರಾಜು ವೇರ್ಣೆಕರ, ಡಾ.ನವೀನ್ ಹಿರೇಗೌಡರ, ಲಯನ್ಸ್ ಲೇಡಿ ವಿಂಗ್‌ನ ಅಧ್ಯಕ್ಷೆ ಸಾವಿತ್ರಿ ಶಿಗ್ಲಿ, ಕಾರ್ಯದರ್ಶಿ ಅಮೃತಾ ವಾರಕರ, ಖಜಾಂಚಿ ಸುರೇಖಾ ಮಲ್ಲಾಡದ, ವೀಣಾ ಸುಲಾಖೆ ಸೇರಿದಂತೆ ಎರಡೂ ಕ್ಲಬ್‌ನ ಸದಸ್ಯರು, ಶಾಲಾ ಮುಖ್ಯೋಪಾಧ್ಯಾಯರು, ಶಿಕ್ಷಕರ ಬಳಗದವರು ಉಪಸ್ಥಿತರಿದ್ದರು.



## ನಿಧನ ವಾರ್ತೆ

### ರತ್ನಮ್ಮ ಎಚ್ಚರಪ್ಪ ಬಡಿಗೇರ



**ಲಕ್ಕುಂಡಿ:** ಇಲ್ಲಿಯ ಗೌಡ್ರ ಓಣಿಯ ನಿವಾಸಿ ರತ್ನಮ್ಮ ಎಚ್ಚರಪ್ಪ ಬಡಿಗೇರ (82) ಇತ್ತೀಚೆಗೆ ನಿಧನರಾದರು. ಮೃತರು 6 ಜನ ಪುತ್ರರು, 3 ಜನ ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

'ಗೃಹ ಜ್ಯೋತಿ" ಯೋಜನೆಗೆ ಕಲಬುರಗಿಯಲ್ಲಿ ಚಾಲನೆ *ನಾವು ನುಡಿದಂತೆ ನಡೆಯುತ್ತೇವೆ, ಇದುವೇ ಕರ್ನಾಟಕ ಮಾದರಿ ಆಡಳಿತ –ಸಿದ್ದರಾಮಯ್ಯ

# ಪಂಚ ಗ್ಯಾರಂಟಿ ಯೋಜನೆ ಜಾರಿ ಖಚಿತ



■ವಿಜಯಸಾಕ್ಷಿ ಸುದ್ದಿ, ಕಲಬುರಗಿ

ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವುದು ಶತಸಿದ್ಧ. ನಮ್ಮ ಸರ್ಕಾರದ 5 ವರ್ಷದ ಅವಧಿಯಲ್ಲಿ ಚುನಾವಣಾ ಪೂರ್ವ ನೀಡಿದ ಎಲ್ಲಾ ಭರವಸೆ ಈಡೇರಿಸಲಾಗುವುದು. ಬುದ್ಧ, ಬಸವ, ಅಂಬೇಡ್ಕರ, ಗಾಂಧಿ, ಕುವೆಂಪು ಅವರ ಆಶಯ ಮತ್ತು ತತ್ವದಂತೆ ನುಡಿದಂತೆ ನಡೆಯುತ್ತೇವೆ. ಇದುವೇ ಕರ್ನಾಟಕ ಮಾದರಿ ಆಡಳಿತ ಎಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಶನಿವಾರ ಕಲಬುರಗಿ ನಗರದ ಎನ್.ವಿ.ಮೈದಾನದಲ್ಲಿ ಇಂಧನ ಇಲಾಖೆ ಆಯೋಜಿಸಿದ ಪಂಚ ಗ್ಯಾರಂಟಿಯಲ್ಲಿ ಒಂದಾದ ಗರಿಷ್ಠ 200 ಯೂನಿಟ್ ಉಚಿತವಾಗಿ ಒದಗಿಸುವ ಉಚಿತ ಬೆಳಕು, ಸುಸ್ಥಿರ ಬದುಕು ಎಂಬ ಧ್ಯೇಯವಾಕ್ಯದ "ಗೃಹ ಜ್ಯೋತಿ" ಕಾರ್ಯಕ್ರಮಕ್ಕೆ ಸಾಂಕೇತಿಕವಾಗಿ 10 ಜನರಿಗೆ ಶೂನ್ಯ ದರದ ವಿದ್ಯುತ್ ಬಿಲ್ ನೀಡುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಸರ್ಕಾರ ಐದು ಗ್ಯಾರಂಟಿಗಳ ಜೊತೆಗೆ ಮುಂದಿನ 5 ವರ್ಷದಲ್ಲಿ ಪ್ರಣಾಳಿಕೆಯಲ್ಲಿ ತಿಳಿಸಿರುವಂತೆ 76 ಭರವಸೆಗಳನ್ನು ಈಡೇರಿಸಲಾಗುವುದು. ಗ್ಯಾರಂಟಿಗಳ ಜೊತೆಗೆ ಅಭಿವೃದ್ಧಿ ಕಾರ್ಯಗಳು ಸಮ-ಸಮನಾಗಿ ನಡೆಯಲಿವೆ. ಯಾವುದೇ ಅನುದಾನ ಕೊರತೆ ಇಲ್ಲ. ಇದರಲ್ಲಿ ಅನುಮಾನ ಬೇಡ ಎಂದು ಮುಖ್ಯಮಂತ್ರಿಗಳು ಭರವಸೆ ನೀಡಿದರು.

ಪಂಚ ಗ್ಯಾರಂಟಿ ಜಾರಿ ಬಗ್ಗೆ ವಿರೋಧ ಪಕ್ಷಗಳು ರಾಜ್ಯ ದಿವಾಳಿಯಾಗುತ್ತದೆ ಎಂದು ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ. ಯೂರೋಪ್ ದೇಶದಲ್ಲಿನ ಸಾರ್ವತ್ರಿಕ ಮೂಲ ಆದಾಯ ಪರಿಕಲ್ಪನೆಯಲ್ಲಿಯೇ ಈ ಐದು ಗ್ಯಾರಂಟಿ ಜಾರಿಗೆ ತರಲಾಗುತ್ತಿದೆ. ಇದರಿಂದ ರಾಜ್ಯದ ದಿವಾಳಿಯಾಗಲ್ಲ, ಬದಲಾಗಿ ಜನರು ಕೊಂಡುಕೊಳ್ಳುವ ಶಕ್ತಿ ಹೆಚ್ಚಲಿದೆ. ಗೃಹ ಲಕ್ಷ್ಮೀ ಯೋಜನೆಯಡಿ ಮಾಸಿಕ 2,000 ರೂ., 200 ಯೂನಿಟ್ ಉಚಿತ ವಿದ್ಯುತ್, ಮಹಿಳೆಯರಿಗೆ ಉಚಿತ, ಅನ್ನ ಭಾಗ್ಯ, ಯುವ ನಿಧಿ ಈ ಯೋಜನೆಗಳ ಜಾರಿ ಪರಿಣಾಮ ರಾಜ್ಯದ ಜಿಡಿಪಿ, ಆರ್ಥಿಕ ಚಟುವಟಿಕೆ ಜಾಸ್ತಿಯಾಗುತ್ತದೆ. ಐದು ಗ್ಯಾರಂಟಿಗಳಿಂದ ಮಾಸಿಕ ಒಬ್ಬರಿಗೆ 4 ರಿಂದ 5 ಸಾವಿರ ರೂ. ದೊರೆತರೆ, ವಾರ್ಷಿಕ 48 ರಿಂದ 60 ಸಾವಿರ ರೂ. ಲಭಿಸಲಿದೆ ಎಂದು ತಿಳಿಸಿದರು.

**ಆಗಸ್ಟ್ 24ಕ್ಕೆ ಗೃಹ ಲಕ್ಷ್ಮೀಗೆ ಚಾಲನೆ:**

ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ ಐದು ಗ್ಯಾರಂಟಿಗಳನ್ನು ಜಾರಿಗೊಳಿಸಲು ಸಚಿವ ಸಂಪುಟ ತೀರ್ಮಾನ ಕೈಗೊಂಡಿತ್ತು. ಅದರಂತೆ ಜೂನ್ 11 ರಂದು 'ಶಕ್ತಿ' ಯೋಜನೆ ಜಾರಿಗೊಳಿಸಿದೆ. ಪ್ರತಿ ದಿನ ಸುಮಾರು 55 ಲಕ್ಷ ಇದುವರೆಗೂ 30 ಕೋಟಿಗೂ ಹೆಚ್ಚು ಜನ ಮಹಿಳೆಯರು ಉಚಿತ ಪ್ರಯಾಣದ ಲಾಭ ಪಡೆದಿದ್ದು, ಯೋಜನೆಯಿಂದ ರಾಜ್ಯದ ಮಹಿಳೆಯರು ಸಂತುಷ್ಟರಾಗಿದ್ದಾರೆ. ಬಡತನ ಹಿಂಸೆಯ ಅತಿ ಕೆಟ್ಟ ರೂಪ ಎಂದು ಮಹಾತ್ಮಾ ಗಾಂಧಿ ಹೇಳಿದ್ದಾರೆ. ಹಸಿವು ಮುಕ್ತ ಕರ್ನಾಟಕ್ಕಾಗಿ "ಅನ್ನ ಭಾಗ್ಯ" ಯೋಜನೆಯಡಿ 10 ಕೆ.ಜಿ. ಆಹಾರ ಧಾನ್ಯ ನೀಡಲು ಘೋಷಿಸಲಾಗಿತ್ತು. ಅಕ್ಕಿ ನೀಡಲು ಕೇಂದ್ರ ಸರ್ಕಾರ ಸಹಕರಿಸದ ಕಾರಣ, 5 ಕೆ.ಜಿ ಅಕ್ಕಿಯ ಬದಲು ತಲಾ 170 ರೂ. ಗಳನ್ನು 1.30 ಲಕ್ಷ ಕುಟುಂಬಕ್ಕೆ ಡಿ.ಬಿ.ಟಿ. ಮೂಲಕ ನೀಡಲಾಗುತ್ತಿದೆ. "ಗೃಹ ಜ್ಯೋತಿ" ಕಾರ್ಯಕ್ರಮದಡಿ 2.14 ಕೋಟಿ ಜನ ಲಾಭ ಪಡೆಯಲಿದ್ದು, 1.41 ಕೋಟಿ ಜನರ ಯೋಜನೆಗೆ ನೋಂದಾಯಿಸಿಕೊಂಡಿದ್ದಾರೆ. ಡಿಸೆಂಬರ್-ಜನವರಿಯಲ್ಲಿ ನಿರುದ್ಯೋಗಿಳಗೆ ಕ್ರಮವಾಗಿ 1,500 ಮತ್ತು 3,000 ಭತ್ಯೆ ನೀಡುವ "ಯುವ ನಿಧಿ" ಯೋಜನೆ ಸಹ ಜಾರಿಗೊಳಿಸಲಾಗುವುದು ಎಂದು ಸಿ.ಎಂ. ಸಿದ್ದರಾಮಯ್ಯ ಪಂಚ ಗ್ಯಾರಂಟಿ ಯೋಜನೆಗಳ ಕುರಿತು ತಿಳಿಸಿದರು.

**ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಬದ್ಧ**

ಮನಮೋಹನ್ ಸಿಂಗ್ ಅವರು ಪ್ರಧಾನಿಯಾಗಿದ್ದಾಗ 371ಜೆ ಕಾಯ್ದೆ ತಿದ್ದುಪಡಿ ಮಾಡಿ ಈ ಭಾಗದಲ್ಲಿನ ಅಭಿವೃದ್ಧಿಗೆ ಹೊಸ ಭಾಷೆ ಬರೆದಿದ್ದರು. ಕಲ್ಯಾಣ ಕರ್ನಾಟಕಕ್ಕೆ 371ಜೆ ಸೌಲಭ್ಯ ನೀಡುವಲ್ಲಿ ಡಾ.ಮಲ್ಲಿಕಾರ್ಜುನ ಖರ್ಗೆ ಹಾಗೂ ಮಾಜಿ ಮುಖ್ಯಮಂತ್ರಿ ಧರಂಸಿಂಗ್ ಅವರ ಪಾತ್ರ ದೊಡ್ಡದಾಗಿದೆ. ಲಾಲ್ ಕೃಷ್ಣ ಅಡ್ವಾಣಿಯವರು ದೇಶದ ಉಪಪ್ರಧಾನಿಗಳಾಗಿದ್ದ ಸಂದರ್ಭದಲ್ಲಿ 371ಜೆ ಕಾಯ್ದೆ ತಿದ್ದುಪಡಿಗೆ ಇಚ್ಛಾಶಕ್ತಿ ತೋರಲಿಲ್ಲ. 371ಜೆ ದಿಂದಾಗಿ ಈ ಭಾಗದ ಅನೇಕ ಜನರು ಸರ್ಕಾರಿ ನೌಕರಿ, ಉನ್ನತ ಶಿಕ್ಷಣ ಪಡೆದುಕೊಳ್ಳಲು ಸಾಧ್ಯವಾಗಿದೆ. ಪ್ರಸಕ್ತ ಹಣಕಾಸು ವರ್ಷದಲ್ಲಿ ಘೋಷಿಸಿರುವ 5,000 ಕೋಟಿ ರೂ ಅನುದಾನ ಇದೇ ವರ್ಷದಲ್ಲಿ ಖರ್ಚು ಮಾಡಿದಲ್ಲಿ, ಸಪ್ಲಿಮೆಂಟರಿ ಆಯವ್ಯಯದಲ್ಲಿ ಇನ್ನೂ ಹೆಚ್ಚು ಅನುದಾನ ನೀಡಲಾಗುವುದು ಎಂದರು.

ನಮ್ಮ ಸರ್ಕಾರದ ಹಿಂದಿನ ಅವಧಿಯ 5 ವರ್ಷದಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ 99,600 ಮನೆಗಳು ಸೇರಿದಂತೆ ರಾಜ್ಯದಾದ್ಯಂತ 14,42,000 ಮನೆಗಳನ್ನು ನಿರ್ಮಿಸಲಾಗಿತ್ತು. ಆದರೆ ಹಿಂದಿನ ಸರ್ಕಾರ ಐದು ವರ್ಷದಲ್ಲಿ ಕೇವಲ 3 ಲಕ್ಷ ಮಾತ್ರ ಮನೆ ನಿರ್ಮಾಣ ಮಾಡಿದ್ದು, ಅದರಲ್ಲಿ ಕೇವಲ 19,000 ಮನೆಗಳು ಕಲ್ಯಾಣ ಕರ್ನಾಟಕ ಭಾಗದಲ್ಲಿ ನಿರ್ಮಿಸಿದೆ. ಹೈದ್ರಾಬಾದ್ ಕರ್ನಾಟಕವನ್ನು ಕಲ್ಯಾಣ ಕರ್ನಾಟಕ ಎಂದು ಕೇವಲ ಮರುನಾಮಕರಣ ಮಾಡಿದ್ದೇ ಹಿಂದಿನ ಸರ್ಕಾರದ ಕೊಡುಗೆ ಎಂದು ಸಿ.ಎಂ. ಸಿದ್ದರಾಮಯ್ಯ ತಿಳಿಸಿದರು.

**ವಾರ್ಷಿಕ ಪ್ರತಿ ಕುಟುಂಬಕ್ಕೆ 60 ಸಾವಿರ ರೂ. ಸೌಲಭ್ಯ:**

ರಾಜ್ಯದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಮಾತನಾಡಿ, ಡಾ.ಮಲ್ಲಿಕಾರ್ಜುನ ಖರ್ಗೆ ಅವರು ಈ ಪ್ರದೇಶಕ್ಕೆ 371ಜೆ ತಿದ್ದುಪಡಿ ರೂಪದಲ್ಲಿ ಈಗಾಗಲೆ ತಮ್ಮ ಬದುಕಿನಲ್ಲಿ ಬೆಳಕು ತಂದಿದ್ದಾರೆ. ನಮ್ಮ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳು ಜಾರಿಗೆ ತರುವ ಮೂಲಕ ಬಡವರ ಧ್ವನಿಯಾಗಿ ನಿಂತಿದ್ದೇವೆ. ಈ ಯೋಜನೆಗಳಿಂದ ರಾಜ್ಯದ ಪ್ರತಿ ಕುಟುಂಬಕ್ಕೆ ವಾರ್ಷಿಕ 60 ಸಾವಿರ ರೂ. ಸೌಲಭ್ಯ ಸಿಗಲಿದೆ. ಬಡವರ ಹೊಟ್ಟೆಗೆ ಅನ್ನ, ಉಚಿತ ವಿದ್ಯುತ್, ಮಹಿಳೆಯರಿಗೆ ಪ್ರಯಾಣ ಉಚಿತ, ಮಹಿಳೆಯರಿಗೆ 2,000 ರೂ. ಆರ್ಥಿಕ ಸಹಾಯ, ನಿರುದ್ಯೋಗಿಗೆ ಯುವ ನಿಧಿ ಯೋಜನೆಯಿಂದ ರಾಜ್ಯ ದಿವಾಳಿಯಾಗುತ್ತದೆ ಎಂದು ಕೆಲವರು ಮಾತನಾಡುತ್ತಾರೆ, ಆದರೆ ದೇಶವನ್ನು ಲೂಟಿ ಹೊಡೆದು ವಿದೇಶಕ್ಕೆ ಹಾರಿದವರ ಬಗ್ಗೆ ಯಾರು ಚಕಾರ ಎತ್ತಲ್ಲ ಎಂದ ಅವರು ಜನರ ಬದುಕಿನಲ್ಲಿ ಭರವಸೆಯ ಬೆಳಕು ಚೆಲ್ಲುವ ಯೋಜನೆ ಇವಾಗಿವೆ ಎಂದರು.

ರಾಜ್ಯದ ಇಂಧನ ಸಚಿವ ಕೆ.ಜೆ. ಜಾರ್ಜ್, ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಡಾ. ಶರಣಪ್ರಕಾಶ ಪಾಟೀಲ ಅವರು ಸಹ ಮಾತನಾಡಿದರು.

10 ಜನ ಫಲಾನುಭವಿಗಳಿಗೆ ಶೂನ್ಯ ದರದ ಬಿಲ್ ವಿತರಣೆ: ದೇಶಕ್ಕೆ ಮಾದರಿಯಾಗಿ 200 ಯೂನಿಟ್ ಉಚಿತ ವಿದ್ಯುತ್ ಒದಗಿಸುವ ಗೃಹ ಜ್ಯೋತಿ ಯೋಜನೆಯಡಿ ಸಾಂಕೇತಿಕವಾಗಿ 10 ಜನ ಫಲಾನುಭವಿಗೆ ಸಿ.ಎಂ.ಸಿದ್ದರಾಮಯ್ಯ, ಡಾ.ಮಲ್ಲಿಕಾರ್ಜುನ ಖರ್ಗೆ, ಡಿ.ಸಿಎಂ. ಡಿ.ಕೆ.ಶಿವಕುಮಾರ ಸೇರಿದಂತೆ ವೇದಿಕೆ ಮೇಲಿದ್ದ ಸಚಿವರು, ಗಣ್ಯರು ಶೂನ್ಯ ದರದ ವಿದ್ಯುತ್ ಬಿಲ್ಲು ವಿತರಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka